ಸಂಪುಟ : 9 ಸಂಚಿಕೆ 281 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 281 Pages : 4+2 Price : 3.00 Friday December 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಡಿ. 21ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ಕೈಗಾರಿಕಾ, ನಿರಂತರಜ್ಯೋತಿ, ಇ.ಐ.ಪಿ, ಸೋಲಾರ್ ಐ.ಪಿ.ಪಿ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## ನಾಳೆ ವಿದ್ಯುತ್ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿರುವ ಪ್ರಯುಕ್ತ ಡಿ. 21ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ಸದರಿ ಪ್ರಕಟಣೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಕಟಣೆ ಕೋರಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮುದಾಯ ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೇರಿದ ಬೆಟಗೇರಿ ಹಾಗೂ ನರೇಗಲ್ ಸಂಸ್ಥೆಗಳಿಗೆ ವಿವಿಧ ತಜ್ಞ ವೈದ್ಯರ ಹುದ್ದೆಗಳ ಅವಶ್ಯಕತೆ ಹಿನ್ನೆಲೆಯಲ್ಲಿ ಜನರಲ್ ಮೆಡಿಸನ್, ಚಿಕ್ಕಮಕ್ಕಳ ತಜ್ಞರು, ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರು ಅರವಳಿಕೆ ತಜ್ಞರು ಸದರಿ ಮಂಜೂರಾದ ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ಅಥವಾ ಕ್ರಮಬದ್ಧವಾಗಿ ನೇಮಕವಾಗುವವರೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸಂದರ್ಶನ (ವಾಕ್-ಇನ್-ಇಂಟರ್‌ವ್ಯೂವ್) ಮೂಲಕ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ.

ಇಚ್ಚೆಯುಳ್ಳ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ-101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿಗೆ ತಮ್ಮ ಬಯೋಡೆಟಾ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳ ದ್ವಿ ಪ್ರತಿಗಳೊಂದಿಗೆ ದಿ.0 2-01-2025 ರಂದು ಸಂದರ್ಶನಕ್ಕೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾಗಿದೆ.

### 1924ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ಅಧಿಕೃತ ನಿರ್ಣಯ ಮಂಡಿಸಿದ ಸಚಿವ ಎಚ್.ಕೆ. ಪಾಟೀಲ

# ಸೌಹಾರ್ದತೆಯ ಭಾವನೆಗಳನ್ನು ಬಿತ್ತಿದ ನೆಲ ಬೆಳಗಾವಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಬೆಳಗಾವಿಯಲ್ಲಿ 1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನವು ದೇಶದಲ್ಲಿ ಸ್ವಾತಂತ್ರ್ಯ ಚಳುವಳಿಗೆ ಹೊಸಶಕ್ತಿ ನೀಡುವ ವಿಚಾರಗಳು, ಕರ್ನಾಟಕ ಏಕೀಕರಣಕ್ಕೆ ಮುನ್ನುಡಿ, ಸ್ವಾತಂತ್ರ್ಯ ಹೋರಾಟದಿಂದ ಹೊರ ಉಳಿದಿದ್ದವರನ್ನು ಕಾಂಗ್ರೆಸ್ ತೆಕ್ಕೆಗೆ ಸೇರಿಸಿಕೊಂಡು ಹೋರಾಟಕ್ಕೆ ಅಣಿಗೊಳಿಸುವುದು, ಹಿಂದೂ-ಮುಸ್ಲಿಂ ಭಾವೈಕ್ಯತೆ ಭಾವನೆಗಳನ್ನು ಗಟ್ಟಿಗೊಳಿಸುವದು ಸೇರಿದಂತೆ ಮಹತ್ವದ ಚಾರಿತ್ರಿಕ ನಿರ್ಣಯಗಳಿಗೆ ಸಾಕ್ಷಿಯಾಗಿದೆ. ಬರುವ ಡಿಸೆಂಬರ್ 26 ಹಾಗೂ 27ರಂದು ಬೆಳಗಾವಿಯಲ್ಲಿ 1924ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆಗೆ ಚಾಲನೆ ನೀಡಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ



ಎಚ್.ಕೆ. ಪಾಟೀಲ ಹೇಳಿದರು.

ವಿಧಾನಸಭೆಯಲ್ಲಿ ಗುರುವಾರ ಈ ಕುರಿತು ಅವರು ಅಧಿಕೃತ ನಿರ್ಣಯ ವಾಚನ ಮಾಡಿದರು.

ಬೆಳಗಾವಿಯಲ್ಲಿ 1924ರಲ್ಲಿ ನಡೆದ 39ನೇ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನಕ್ಕೆ ಈಗ ಶತಮಾನದ ಸಂಭ್ರಮ. ಅಂದು ದೇಶದ ಸ್ವಾಂತ್ರತ್ಯಕ್ಕಾಗಿ, ಸ್ವರಾಜ್ಯ ಸ್ಥಾಪನೆಗಾಗಿ, ಸರ್ವ ಜನರ ಸ್ವಾಭಿಮಾನಕ್ಕಾಗಿ ಹೋರಾಡುತ್ತಿದ್ದ ದೇಶದ ಏಕೈಕ ಬೃಹತ್ ಸಂಘಟನೆ ಭಾರತ ರಾಷ್ಟ್ರೀಯ ಕಾಂಗ್ರೆಸ್. ಹೀಗಾಗಿಯೇ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮಹತ್ತರ ಪಾತ್ರ ವಹಿಸಿತ್ತು. ಬೇರೆ ಬೇರೆ ಕಾರಣಗಳಿಂದ ಕಾಂಗ್ರೆಸ್‌ನಿಂದ ದೂರ ಇದ್ದವರು, ಸ್ವಾತಂತ್ರ್ಯ ಹೋರಾಟದಿಂದ ದೂರ ಉಳಿದವರು ಈ ಅಧಿವೇಶನದ ನಂತರ ಮನಃಪರಿವರ್ತನೆಗೊಂಡು ಭಾರತ ರಾಷ್ಟ್ರೀಯ ಕಾಂಗ್ರೆಸ್‌ಗೆ ಮರಳಲಾರಂಭಿಸಿದ್ದರು. ಮುನಿಸಿಕೊಂಡಿದ್ದ ಸ್ವರಾಜ್ಯ ಪಕ್ಷದವರನ್ನೂ ಮತ್ತು ಮುಸ್ಲಿಮರನ್ನು ಪುನಃ ಕಾಂಗ್ರೆಸ್‌ನೊಂದಿಗೆ ಒಂದುಗೂಡಿಸಿದ್ದರಿಂದ ಈ ಅಧಿವೇಶನವು ಐಕ್ಯತಾ ಸಮ್ಮೇಳನ ಎಂದೇ ಹೆಸರು ಪಡೆದಿದೆ ಎಂದರು.

ಭಾರತದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿಯೇ ವಿಶೇಷವಾದ ಅಧಿವೇಶನ ಎಂಬ ಹೆಗ್ಗಳಿಕೆಗೂ ಈ ಬೆಳಗಾವಿ ಅಧಿವೇಶನ ಪಾತ್ರವಾಗಿದೆ. ಇದಕ್ಕೆ ಕಾರಣ ನಮ್ಮ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ ಏಕೈಕ ಅಧಿವೇಶನ ಇದು. ಅಲ್ಲದೆ ನಮ್ಮ ರಾಜ್ಯದಲ್ಲಿ ನಡೆದ ಏಕೈಕ ಸ್ವಾತಂತ್ರ್ಯ ಪೂರ್ವ ಕಾಂಗ್ರೆಸ್ ಅಧಿವೇಶನ ಕೂಡ ಹೌದು. ಹಿಂದೂ-ಮುಸ್ಲಿಂ ಸೌಹಾರ್ದತೆಯನ್ನು ಸಾರಿ, ಏಕತೆಯಿಂದ ಅಖಂಡ ಭಾರತದಾದ್ಯಂತ ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚು ಹೆಚ್ಚಿಸಿದ, 'ಗಾಂಧಿ' ಎನ್ನುವ ಬಿಂಬ ಸಾವಿರ ಕಣ್ಣುಗಳಲ್ಲಿ ಸಾವಿರ ತೆರನಾಗಿ ರೂಪಗೊಳ್ಳಲು ಕಾರಣವಾದ ವೇದಿಕೆ ಇದಾಗಿತ್ತು ಎಂದು ಹೇಳಿದರು.

1924ರವರೆಗೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಬರಿ ಸ್ವಾತಂತ್ರ್ಯ ಹೋರಾಟಕ್ಕೆ ಮೀಸಲಾಗಿದ್ದ ರಾಜಕೀಯ ಸಂಘಟನೆ. ಆದರೆ ಈ ಅಧಿವೇಶನದಲ್ಲಿ ಅಧ್ಯಕ್ಷೀಯ ಭಾಷಣ ಮಾಡಿದ್ದ ಮಹಾತ್ಮ ಗಾಂಧೀಜಿಯವರು ಭಾರತದ ಸಾಮಾಜಿಕ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಿ, ಭಾರತ ರಾಷ್ಟ್ರೀಯ ಕಾಂಗ್ರೆಸ್ ಸಮಾಜ ಸುಧಾರಣೆಗಾಗಿಯೂ ಶ್ರಮಿಸುವ ಅಗತ್ಯವನ್ನು ಒತ್ತಿ ಹೇಳುವುದರ ಮೂಲಕ ಪಕ್ಷವನ್ನು ಸಾಮಾಜಿಕ ಸಮಸ್ಯೆಗಳ ವಿರುದ್ಧದ ಹೋರಾಟಕ್ಕೂ ಅಣಿಗೊಳಿಸಿದ್ದರು. ಅಸ್ಪೃಶ್ಯತೆಯ ಆಳ-ಅಗಲವನ್ನು ಎತ್ತಿ ತೋರಿಸಿ, ಇದರ ನಿವಾರಣೆಗೆ ಇಡೀ ದೇಶ ನಿರ್ಣಯಿಸುವಂತೆ ಮಹಾತ್ಮ ಗಾಂಧೀಜಿ ಈ ವೇದಿಕೆಯ ಮೂಲಕವೇ ಮಾಡಿದ್ದರು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಹಲವಾರು ಸಂಘಟನೆಗಳನ್ನು ಸ್ಥಾಪಿಸಲಾಯಿತು. ಅಸ್ಪೃಶ್ಯತೆ ವಿರುದ್ಧದ ಕಾರ್ಯಕ್ರಮಗಳು ಚಳವಳಿಯ ಸ್ವರೂಪ ಪಡೆದುಕೊಂಡಿದ್ದವು. ಈ ಅಧಿವೇಶನದ ಮೂಲಕ ಸಾಮಾಜಿಕ ವಿಷಯಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್‌ನ ಧೋರಣೆಗಳು ಕೂಡ ಬದಲಾಗಿದ್ದವು.

ಬ್ರಿಟೀಷರ ದಬ್ಬಾಳಿಕೆಯ ವಿರುದ್ಧ ಚರಕದ ಮೂಲಕ ಹೋರಾಟ ಆರಂಭಿಸಿದ್ದ ಭಾರತೀಯ ಸ್ವಾತಂತ್ರ್ಯ ಹೋರಾಟಗಾರರಿಗೆ, ಚರಕದ ಮಹತ್ವವನ್ನು ಮಹಾತ್ಮ ಗಾಂಧೀಜಿ ಮನಮುಟ್ಟುವಂತೆ ತಿಳಿ ಹೇಳಿದ್ದು ಇದೇ ಅಧಿವೇಶನದಲ್ಲಿ. ಮುಂದೆ ಖಾದಿ ಪ್ರಚಾರ ಚುರುಕು ಪಡೆದು, ಇಡೀ ದೇಶ ಖಾದಿಮಯವಾಗಿತ್ತು. ವಿದೇಶಿ ವಸ್ತ್ರ ದಹನ ಸಾಮಾನ್ಯ ಎಂಬಂತಾಗಿತ್ತು ಎಂದು ತಿಳಿಸಿದರು.

ಹಲವಾರು ಕಾರಣಗಳಿಂದಾಗಿ ಮಹಾತ್ಮ ಗಾಂಧೀಜಿಯವರ ಮೆಚ್ಚುಗೆಗೆ ಪಾತ್ರವಾಗಿದ್ದ ಈ ಅಧಿವೇಶನ ಸಂಘಟನೆ, ಸಮರ್ಥ ಆಯೋಜನೆ, ಶಿಸ್ತುಬದ್ಧ ಕಾರ್ಯಕಲಾಪ, ಪ್ರಜಾತಾಂತ್ರಿಕ ಮೌಲ್ಯಗಳಿಗೆ ಮನ್ನಣೆ ಈ ಎಲ್ಲ ಕಾರಣಗಳಿಂದಾಗಿ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸದಲ್ಲಿ ಬಹಳ ಪ್ರಾಮುಖ್ಯತೆ ಪಡೆದುಕೊಂಡಿದೆ. ಇಂಥ ಅಧಿವೇಶನ ನಡೆದು ನೂರು ವರ್ಷ ತುಂಬಿದ ಈ ಸಂದರ್ಭದಲ್ಲಿ ಕರ್ನಾಟಕದಲ್ಲಿ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಆಚರಣೆ ಹೊಸ ಪೀಳಿಗೆಗೆ ಸ್ಫೂರ್ತಿ, ಪ್ರೇರಣೆ ನೀಡಲಿ ಎಂದು ಸಚಿವ ಎಚ್. ಕೆ. ಪಾಟೀಲ ತಮ್ಮ ನಿರ್ಣಯದ ಮೂಲಕ ಆಶಯ ವ್ಯಕ್ತಪಡಿಸಿದರು.

1924ರ ಡಿಸೆಂಬರ್ 26 ಮತ್ತು 27ರಂದು ನಡೆದ ಈ ಅಧಿವೇಶನದಲ್ಲಿ ಅಖಂಡ ಭಾರತದ ಮೂಲೆ ಮೂಲೆಯಿಂದ ಆಗಮಿಸಿದ್ದ 1,844 ಪ್ರತಿನಿಧಿಗಳು ಭಾಗವಹಿಸಿದ್ದರು. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗಿಯಾಗುತ್ತಿದ್ದ ಬಹುತೇಕ ಎಲ್ಲ ನಾಯಕರೂ ಈ ಅಧಿವೇಶನದಲ್ಲಿದ್ದರು. ಬಹಳ ಮುಖ್ಯವಾದ ಒಟ್ಟು 16 ನಿರ್ಣಯಗಳು ಅಂಗೀಕರಿಸಲ್ಪಟ್ಟವು. ಅಧಿವೇಶನದ ಜತೆ ಜತೆಗೆ ವಿವಿಧ ವಿಷಯಗಳಿಗೆ ಸಂಬಂಧಿಸಿದ ಸಮಾನ ಸಮ್ಮೇಳನಗಳು ನಡೆದಿದ್ದವು. ಇದರಲ್ಲಿ ಕರ್ನಾಟಕ ಏಕೀಕರಣದ ಸಮ್ಮೇಳನವೂ ಒಂದು. ಈ ಸಮ್ಮೇಳನದ ಮೂಲಕ ನಮ್ಮ ನಾಡಿನ ಏಕೀಕರಣದ ಹೋರಾಟಕ್ಕೆ ಅಧಿಕೃತವಾಗಿ ಚಾಲನೆ, ಪ್ರೇರಣೆ ದೊರೆತಿತ್ತು. ಸ್ವಾತಂತ್ರ್ಯ ಹೋರಾಟದೊಂದಿಗೇ ನಾಡುಕಟ್ಟುವ ಕಾರ್ಯವೂ ಆರಂಭಗೊಂಡಿತ್ತು ಎಂದು ಸಚಿವ ಎಚ್.ಕೆ. ಪಾಟೀಲ ಇತಿಹಾಸ ಸ್ಮರಿಸಿದರು.

### ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವಹೇಳನಕಾರಿ ಹೇಳಿಕೆ

# ಜಿಲ್ಲಾ ಕಾಂಗ್ರೆಸ್ ವತಿಯಿಂದ ಪ್ರತಿಭಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂಸತ್ ಸದನದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಅತ್ಯಂತ ಅವಹೇಳನಕಾರಿಯಾಗಿ ಮಾತಾಡಿದ್ದನ್ನು ಖಂಡಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಡಿ. 20ರಂದು ಬೆಳಿಗ್ಗೆ 11ಕ್ಕೆ ಪ್ರತಿಭಟನೆ ಜರುಗಲಿದೆ.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ,



ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರಿಫಾರ್ಮ್ಸ್ ವಿಭಾಗ, ಐಟಿ-ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ

ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ, ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ, ರೋಣ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಸೇರಿದಂತೆ ಕೆಪಿಸಿಸಿ ಉಸ್ತುವಾರಿಗಳು ಹಾಗೂ ಮಾಜಿ ಶಾಸಕರು ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಳ್ಳುವರು.

ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ತಾಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯಲ್ಲಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ

# ಆರ್ಥಿಕ ಸಬಲೀಕರಣಕ್ಕೆ ಗ್ಯಾರಂಟಿ ಯೋಜನೆಗಳು ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದ ಬಡ ಕುಟುಂಬಗಳ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಿವೆ. ಅರ್ಹರಿಗೆ ಯೋಜನೆಗಳ ಸೌಲಭ್ಯ ಸುಲಭವಾಗಿ ತಲುಪಲು ಅಧಿಕಾರಿ ವರ್ಗ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು ಎಂದು ತಾಲೂಕಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ಜಿಲ್ಲಾಡಳಿತ ಭವನದ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಗುರುವಾರ ತಾಲೂಕಾ ಆಡಳಿತ, ತಾಲೂಕು ಪಂಚಾಯತ್ ಸಹಯೋಗದಲ್ಲಿ ಏರ್ಪಡಿಸಿದ್ದ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅಧಿಕಾರಿಗಳಿಗೆ ಸೂಕ್ತ ಸಲಹೆ-ಸೂಚನೆಗಳನ್ನು ನೀಡಿದರು.

ಸೆಪ್ಟೆಂಬರ್ 19ರಂದು ಜಿಲ್ಲಾಡಳಿತದಲ್ಲಿ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೇತೃತ್ವದಲ್ಲಿ ನಡೆಸಲಾಯಿತು. ಈ ಸಭೆಯಲ್ಲಿ ಸಚಿವರ ಸೂಚನೆಯಂತೆ ತಾಲೂಕಾ ಮಟ್ಟದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಶೇ. 100ರಷ್ಟು ಪ್ರಗತಿ ಸಾಧಿಸಬೇಕು ಹಾಗೂ ಪಂಚ ಗ್ಯಾರಂಟಿಗಳ ಅನುಷ್ಠಾನಕ್ಕೆ ಇರುವ ತಾಂತ್ರಿಕ ತೊಡಕುಗಳ ನಿವಾರಣೆಗೆ ಸಮಿತಿ ಚಟುವಟಿಕೆಯಿಂದ ಕಾರ್ಯನಿರ್ವಹಿಸುವಂತೆ ಹೇಳಿದ್ದರು. ಅವರ ಮಾರ್ಗದರ್ಶನದಂತೆ ನಾವೆಲ್ಲರೂ ಅರ್ಹರಿಗೆ ಗ್ಯಾರಂಟಿ ಸೌಲಭ್ಯ ತಲುಪುವಂತೆ ಕಾರ್ಯನಿರ್ವಹಿಸೋಣ ಎಂದರು.

ಪಂಚ ಗ್ಯಾರಂಟಿಗಳ ಅನುಷ್ಠಾನದಲ್ಲಿ ಇರುವ ತಾಂತ್ರಿಕ ಸಮಸ್ಯೆಗಳ ನಿವಾರಣೆಗೆ ಅಧಿಕಾರಿಗಳು



ಮುತುವರ್ಜಿ ವಹಿಸಿ ಸಮಿತಿ ಸದಸ್ಯರನ್ನು ಒಳಗೊಂಡಂತೆ ಪ್ರತ್ಯೇಕ ಸಭೆಗಳನ್ನು ಏರ್ಪಡಿಸಿ ತಾಂತ್ರಿಕ ಸಮಸ್ಯೆಗಳ ಇತ್ಯರ್ಥಕ್ಕೆ ಮುಂದಾಗೋಣ. ಅಧಿಕಾರಿಗಳು ಸೂಕ್ತ ಸಹಕಾರದೊಂದಿಗೆ ಕೆಲಸ ನಿರ್ವಹಿಸಬೇಕು. ಸರ್ಕಾರದ ಉದ್ದೇಶ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಬಲವರ್ಧನೆಯಾಗಿದೆ. ಸರ್ಕಾರದ ಉದ್ದೇಶದ ಸಾಕಾರಕ್ಕಾಗಿ ನಾವೆಲ್ಲ ಒಮ್ಮತದಿಂದ ಶ್ರಮಿಸೋಣ ಎಂದು ಹೇಳಿದರು.

ಸಮಿತಿ ಸದಸ್ಯರಾದ ಕೃಷ್ಣಗೌಡ ಪಾಟೀಲ ಮಾತನಾಡಿ, ರಾಜ್ಯದ 1.10 ಕೋಟಿ ಕುಟುಂಬಗಳ ಬಡತನ ನಿರ್ಮೂಲನೆ ಮಾಡುವಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಸಫಲವಾಗಿವೆ. ಪಂಚ ಗ್ಯಾರಂಟಿಗಳ ಸದ್ಬಳಕೆಯಿಂದ ಪ್ರತಿ ತಿಂಗಳು ಪ್ರತಿ ಕುಟುಂಬಕ್ಕೆ 5 ಸಾವಿರ ರೂ ಸಹಾಯ ಸಿಗುತ್ತಿದೆ. ಜನಪ್ರತಿನಿಧಿಗಳಾದವರು ಸರ್ಕಾರದ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸುವವರು. ತಾಂತ್ರಿಕ ತೊಂದರೆಗಳ ನಿವಾರಣೆಗೆ ಪ್ರತ್ಯೇಕ ಸಭೆ ನಡೆಸಿ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿ ಸಫಲರಾಗೋಣ ಎಂದು ಸಲಹೆ ನೀಡಿದರು.

ಗ್ಯಾರಂಟಿ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಪಡಿತರ ಪಡೆಯಲು ಪಡಿತರದಾರರು ಥಂಬ್ ನೀಡಿದರೂ ತಾಂತ್ರಿಕ ಸಮಸ್ಯೆಗಳಿಂದ ಪಡಿತರ ಪಡೆಯಲು ಸಾಧ್ಯವಾಗುತ್ತಿಲ್ಲ. ಅಲ್ಲದೇ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಗೃಹಲಕ್ಷ್ಮೀ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಿ ಹಲವಾರು ತಿಂಗಳುಗಳೇ ಗತಿಸಿದರೂ ಈವರೆಗೂ ಮಂಜೂರಾತಿ ದೊರೆತಿಲ್ಲ. ಇಂತಹ ಹಲವಾರು ಸಮಸ್ಯೆಗಳಿದ್ದು, ಅವುಗಳ ನಿವಾರಣೆಗೆ ವಿಶೇಷ ಶಿಬಿರ ಹಮ್ಮಿಕೊಳ್ಳುವ ಮೂಲಕ ಸ್ಥಳದಲ್ಲೇ ತಾಂತ್ರಿಕ ಸಮಸ್ಯೆಗಳ ಇತ್ಯರ್ಥಕ್ಕೆ ಮುಂದಾಗೋಣ ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ತಾಂತ್ರಿಕ ತೊಡಕುಗಳ ನಿವಾರಣೆಗೆ ಉನ್ನತ ಅಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಸಮಸ್ಯೆ ಇತ್ಯರ್ಥಕ್ಕೆ ಶ್ರಮಿಸುವ ಮೂಲಕ ಸರ್ಕಾರದ ಉದ್ದೇಶ ಸಾಕಾರಕ್ಕೆ ಅಧಿಕಾರಿಗಳು ಶ್ರಮಿಸಬೇಕು ಎಂದು ಸೂಚಿಸಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ. ಮಾತನಾಡಿ, ಕಳೆದ ಪ್ರಗತಿ ಪರಿಶೀಲನಾ ಸಭೆಯ ನಡುವಳಿಯನ್ನು ಹಾಗೂ ಆಗಿರುವ ಪ್ರಗತಿ ಅಂಕಿ-ಅಂಶಗಳನ್ನು ಸಭೆಗೆ ಮಂಡಿಸಿ, ಶೇ. 100ರಷ್ಟು ಪ್ರಗತಿ ನಮ್ಮ ಗುರಿಯಾಗಿರಲಿ. ರಾಜ್ಯದಲ್ಲಿಯೇ ಗದಗ ತಾಲೂಕು ಪಂಚ ಗ್ಯಾರಂಟಿ ಅನುಷ್ಠಾನದಲ್ಲಿ ಉನ್ನತ ಸ್ಥಾನದಲ್ಲಿರುವಂತೆ ನೋಡಿಕೊಳ್ಳೋಣ ಎಂದರು.

ವಿವಿಧ ಇಲಾಖೆಗಳ ಅಧಿಕಾರಿಗಳು ಗ್ಯಾರಂಟಿ ಅನುಷ್ಠಾನದ ವಿವರಗಳನ್ನು ಸಭೆಗೆ ಮಂಡಿಸಿದರು. ಸಭೆಯಲ್ಲಿ ಸಮಿತಿ ಸದಸ್ಯರುಗಳಾದ ದಯಾನಂದ ಪವಾರ, ಸಂಗು ಕರಕಲಕಟ್ಟಿ, ಮೀನಾಕ್ಷಿ ಬೆನಕಣ್ಣವರ, ಶಂಭು ಕಾಳೆ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ , ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶ ಸಿಂಗ್ ಮಿಟಾಡಿ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ ಪಾಲ್ಗೊಂಡು ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಪಂಚ ಗ್ಯಾರಂಟಿಗಳ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸಭೆಗೆ ಸರಿಯಾದ ಮಾಹಿತಿ ಹಾಗೂ ಸಮರ್ಪಕ ವಿವರಣೆ ನೀಡದಿರುವ ಸಾರಿಗೆ ಸಂಸ್ಥೆಯ ಬೆಟಗೇರಿ ಹಾಗೂ ಗದಗ ವ್ಯವಸ್ಥಾಪಕರು, ಆಹಾರ ಇಲಾಖೆಯ ಮತ್ತು ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳಿಗೆ ನೋಟೀಸ ಜಾರಿಗೊಳಿಸುವಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಮಿತಿಯ ಅಧ್ಯಕ್ಷರು ಸೂಚಿಸಿದರು.

## ಸಂಪಾದಕೀಯ

# ಅವತ್ತು ಬಿಜೆಪಿ ಮಾಡಿದ್ದನ್ನೆ ಇವತ್ತು ಕಾಂಗ್ರೆಸ್ ಮಾಡಿದೆ

ಕೆಲ ತಿಂಗಳ ಹಿಂದಷ್ಟೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅಮೆರಿಕ ಪ್ರವಾಸ ಕೈಗೊಂಡಿದ್ದು ತಮಗೆಲ್ಲ ನೆನಪಿದೆ. ಆ ಸಂದರ್ಭದಲ್ಲಿ ರಾಹುಲ್ ಗಾಂಧಿ ನೀಡಿದ ಸಂದರ್ಶನ ಒಂದರಲ್ಲಿ, ಭಾರತದಲ್ಲಿ ಸಮಾನತೆ ಸೃಷ್ಟಿಯಾದಾಗ ಮೀಸಲಾತಿ ತೆಗೆಯುವ ಚಿಂತನೆಯನ್ನು ಕಾಂಗ್ರೆಸ್ ನಡೆಸಲಿದೆ ಎಂದಿದ್ದರು.

ಬಿಜೆಪಿಯ ಐಟಿ ಸೆಲ್, ರಾಹುಲ್ ಗಾಂಧಿ ಹೇಳಿಕೆಯ ಅಲ್ಪ ಭಾಗವನ್ನು ಕತ್ತರಿಸಿ ಬಿತ್ತರಿಸಿತು. ಬಿಜೆಪಿ ರಾಹುಲ್ ಗಾಂಧಿ ಮೀಸಲಾತಿಯ ವಿರೋಧಿ ಎನ್ನುವ ಹಣೆಪಟ್ಟಿಯನ್ನು ಕಟ್ಟಲಾಯಿತು. ಚರ್ಚೆ ತೀವ್ರವಾದಾಗ ರಾಹುಲ್ ಗಾಂಧಿ ಅದಕ್ಕೆ ಸ್ಪಷ್ಟೀಕರಣವನ್ನು ನೀಡಬೇಕಾಗಿತ್ತು.

ಇವತ್ತು ಆಗಿದ್ದು ಅಂತಹದ್ದೇ ಘಟನೆ. ರಾಜ್ಯಸಭೆಯಲ್ಲಿ ಅಮಿತ್ ಶಾ ಮಾತನಾಡುವ ಸಂದರ್ಭದಲ್ಲಿ, ಅಂಬೇಡ್ಕರ್ ಹೆಸರು ಹೇಳುವುದು ಫ್ಯಾಷನ್ ಆಗಿದೆ, ಅಂಬೇಡ್ಕರ್ ಹೆಸರನ್ನು ಜಪಿಸಿದಷ್ಟು ದೇವರ ಹೆಸರನ್ನು ಜಪಿಸಿದ್ದರೆ ಸ್ವರ್ಗ ಪ್ರಾಪ್ತವಾಗುತ್ತಿತ್ತು ಎಂದಿರುವುದು ಈಗ ದೇಶಾದ್ಯಂತ ಚರ್ಚೆ ಹುಟ್ಟುಹಾಕಿದೆ.

ಸುಮಾರು ಒಂದೂವರೆ ನಿಮಿಷದ ಭಾಷಣದ 12 ಸೆಕೆಂಡ್‌ಗಳ ವಿಡಿಯೋ ಇವತ್ತು ವಿವಾದಕ್ಕೆ ಕಾರಣವಾಗಿದೆ. ಕೇವಲ 12 ಸೆಕೆಂಡ್ ವಿಡಿಯೋ ಅಷ್ಟನ್ನೆ ಪರಿಗಣಿಸುವುದಾದರೆ ಅಮಿತ್ ಶಾ ಹೇಳಿಕೆಯನ್ನು ಅತ್ಯುಗ್ರವಾಗಿ ಖಂಡಿಸಬೇಕು. ಇಡೀ ಭಾಷಣದ ವಸ್ತು, ವಿಷಯವನ್ನು ಪರಿಗಣಿಸುವುದಾದರೂ ಅಮಿತ್ ಶಾ ಹೇಳಿಕೆ ಜೊತೆಗೆ ಜವಾಹರ ಲಾಲ್ ನೆಹರೂ ಹೇಳಿಕೆಯನ್ನೂ ಅಷ್ಟೆ ಉಗ್ರವಾಗಿ ಖಂಡಿಸಬೇಕು.

ಬಿಜೆಪಿ ಮನುವಾದಿ ಪಕ್ಷ. ಅಂಬೇಡ್ಕರ್, ಸಂವಿಧಾನದ ಬಗ್ಗೆ ಬಿಜೆಪಿಗೆ ಗೌರವ ಇಲ್ಲ ಎನ್ನುವವರ ಧೋರಣೆಯನ್ನು ಒಪ್ಪೋಣ. ಆದರೆ ಕಾಂಗ್ರೆಸ್ಸಿಗರು ಅಂಬೇಡ್ಕರ್ ಅವರಿಗೆ ಯಾವ ರೀತಿ ಗೌರವ ಸಮರ್ಪಿಸಿದರು. ಅಂಬೇಡ್ಕರ್ ಅವರನ್ನು ಸದಾ ನೆನೆಯುವಂಥ ಯಾವ ಕೆಲಸ ಮಾಡಿದ್ದಾರೆ ಎನ್ನುವ ಬಗ್ಗೆಯೂ ಚಿಂತನೆ ನಡೆಯಬೇಕು.

ಆದರೆ ಇವತ್ತು ಅಂಬೇಡ್ಕರ್ ಕುರಿತಾಗಿ ಯಾವ ರಾಜಕಾರಣಿಗೂ ಚಿಂತನೆ ಬೇಕಾಗಿಲ್ಲ. ಅವರ ಹೆಸರನ್ನು ಬಳಕೆ ಮಾಡಿಕೊಂಡು ರಾಜಕಾರಣ ಮಾಡುವುದಷ್ಟೆ ಬೇಕಾಗಿದೆ. ಅಂಬೇಡ್ಕರ್ ಹೆಸರು ಪ್ರಸ್ತಾಪವಾಗುತ್ತಿದ್ದಂತೆ ವಿವಾದ ಸೃಷ್ಟಿಸುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿದೆ. ಇದು ನಿಲ್ಲಬೇಕು. ಸಂವಿಧಾನ ಮತ್ತು ಅಂಬೇಡ್ಕರ್ ಅವರನ್ನು ಅರ್ಥೈಸಿಕೊಳ್ಳುವ, ಅರಿಯುವ ಕೆಲಸ ನಡೆಯಬೇಕು.

## ಬಾಂಗ್ಲಾದೇಶ | ನಿಷೇಧಿತ ಉಲ್ಫಾ ಸಂಘಟನೆಯ ಮುಖ್ಯಸ್ಥನ ಶಿಕ್ಷೆ ಕಡಿತಗೊಳಿಸಿದ ಕೋರ್ಟ್



■ ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ

ಬಾಂಗ್ಲಾದೇಶದ ಸುಪ್ರೀಂ ಕೋರ್ಟ್‌ನ ಹೈಕೋರ್ಟ್ ಪೀಠವು 2004 ರ ಶಸ್ತ್ರಾಸ್ತ್ರ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಷೇಧಿತ ಸಂಘಟನೆಯಾದ ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸೋಮ್(ಉಲ್ಫಾ) ಮುಖ್ಯಸ್ಥ ಪರೇಶ್ ಬರುವಾ ಅವರ ಮರಣದಂಡನೆ ಶಿಕ್ಷೆಯನ್ನು ಜೀವಾವಧಿ ಶಿಕ್ಷೆಗೆ ಬುಧವಾರ ಪರಿವರ್ತಿಸಿದೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಬಾಂಗ್ಲಾದೇಶ ನ್ಯಾಯಮೂರ್ತಿಗಳಾದ ಮುಸ್ತಫಾ ಜಮಾನ್ ಇಸ್ಲಾಂ ಮತ್ತು ನಸ್ರೀನ್ ಅಕ್ಟರ್ ಅವರನ್ನೊಳಗೊಂಡ ಪೀಠವು ಮಾಜಿ ಸಚಿವ ಲುಟ್‌ಫೊಝುಮಾನ್ ಬಾಬರ್ ಮತ್ತು ಇತರ ಐವರನ್ನು ದೋಷಮುಕ್ತಗೊಳಿಸಿದೆ ಎಂದು ಇಂಡಿಯಾ ಟುಡೇ ವರದಿ ಮಾಡಿದೆ. ಬಾಂಗ್ಲಾದೇಶ

ಏಪ್ರಿಲ್ 1, 2004 ರಂದು ಬಾಂಗ್ಲಾದೇಶ ಪೊಲೀಸರು 4,930 ಬಂದೂಕುಗಳು, 27,020 ಗ್ರೆನೇಡ್‌ಗಳು, 840 ರಾಕೆಟ್ ಲಾಂಚರ್‌ಗಳು, 300 ರಾಕೆಟ್‌ಗಳು, 2,000 ಗ್ರೆನೇಡ್ ಉಡಾವಣಾ ಟ್ಯೂಬ್‌ಗಳು, 6,392 ಪಿಸ್ತೂಲ್‌ಗಳು ಮತ್ತು 1.14 ಮಿಲಿಯನ್ ಬುಲೆಟ್‌ಗಳನ್ನು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿ ಈ ತೀರ್ಪು ನೀಡಿದೆ.

ಚಿತ್ತಗಾಂಗ್‌ನ ಜೆಟ್ಟಿಯಲ್ಲಿ ಎರಡು ದೋಣಿಗಳಿಂದ ಟ್ರಕ್‌ಗಳಿಗೆ ಲೋಡ್ ಮಾಡುತ್ತಿದ್ದಾಗ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿತ್ತು. ಅವುಗಳನ್ನು ಚೀನಾದಲ್ಲಿ ತಯಾರಿಸಲಾಗಿದ್ದು ಮತ್ತು ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸೋಮ್‌ಗೆ ರವಾನಿಸಲಾಗುತ್ತಿತ್ತು ಎಂದು ತನಿಖೆಯು ಬಹಿರಂಗಪಡಿಸಿತ್ತು.

ಜನವರಿ 2014 ರಲ್ಲಿ, ಚಿತ್ತಗಾಂಗ್‌ನ ವಿಶೇಷ ನ್ಯಾಯಾಲಯವು ಬರುವಾ ಮತ್ತು ಇತರ 13 ಜನರಿಗೆ ಮರಣದಂಡನೆ ವಿಧಿಸಿತು ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸೋಮ್ ಅನ್ನು ಭಾರತದಲ್ಲಿ 1990 ರಲ್ಲಿ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆಯ ಅಡಿಯಲ್ಲಿ ನಿಷೇಧಿಸಲಾಗಿದೆ.

## 'ಅಂಬೇಡ್ಕರ್ ಪರಂಪರೆಗೆ ಧಕ್ಕೆಯಾಗುವುದನ್ನು ಸಹಿಸುವುದಿಲ್ಲ'; ಅಮಿತ್ ಶಾ ಹೇಳಿಕೆಗೆ ಕಮಲ್ ಹಾಸನ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

"ಭಾರತದ ಸಂವಿಧಾನದ ಶಿಲ್ಪಿ ರೂಪಿಸಿದ ವಿಚಾರಗಳು ಜನರ ಭಾವನೆಗಳನ್ನು ಕೆರಳಿಸಲು ದುರುಪಯೋಗಪಡಿಸಿಕೊಳ್ಳುವ ಬದಲು ಪ್ರಗತಿಗೆ ಪ್ರೇರೇಪಿಸಬೇಕು" ಎಂದು ನಟ ಕಮಲ್ ಹಾಸನ್ ಅವರು ಹೇಳಿದ್ದಾರೆ.

ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯ ಕುರಿತು ಎದ್ದಿರುವ ವಿರೋಧದ ನಡುವೆ, ಅವರ ಈ ಪ್ರತಿಕ್ರಿಯೆ ಬಂದಿದೆ.

ಸಂವಿಧಾನವನ್ನು ಅಂಗೀಕರಿಸಿ 75 ವರ್ಷಗಳನ್ನು ಪೂರೈಸುತ್ತಿರುವ ಸ್ಮರಣಾರ್ಥವಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರ ವಿಚಾರಗಳ ಕುರಿತು ಚರ್ಚೆ ನಡೆಸುವಂತೆ ಕಮಲ್ ಹಾಸನ್ ಸಂಸತ್ತಿನಲ್ಲಿ ಒತ್ತಾಯಿಸಿದರು.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಅಂಬೇಡ್ಕರ್ ಅವರ ಕೊಡುಗೆಗಳನ್ನು ಆಧುನಿಕ ಭಾರತದ ಅಡಿಪಾಯ ಎಂದು ವಿವರಿಸಿದ್ದಾರೆ. "ಗಾಂಧೀಜಿ ಭಾರತವನ್ನು ವಿದೇಶಿ ದಬ್ಬಾಳಿಕೆಯಿಂದ ಮುಕ್ತಗೊಳಿಸಿದರೆ, ಡಾ. ಅಂಬೇಡ್ಕರ್ ಭಾರತವನ್ನು ತನ್ನದೇ ಆದ ಪ್ರಾಚೀನ ಸಾಮಾಜಿಕ ಅನ್ಯಾಯದ ಸಂಕೋಲೆಯಿಂದ ಬಿಡುಗಡೆ ಮಾಡಿದರು" ಎಂದು ಅವರು ಹೇಳಿದ್ದಾರೆ.

### 'ವಿಶ್ವ ಧ್ಯಾನ ದಿನ'ದ ನಿಮಿತ್ತ ವಿಶೇಷ ಲೇಖನ

# ವಿಶ್ವ ಶಾಂತಿಗಾಗಿ 'ಧ್ಯಾನ'

ಡಿಸೆಂಬರ್ 21ರಂದು 'ವಿಶ್ವ ಧ್ಯಾನ ದಿನ' ಎಂದು ಘೋಷಿಸಿರುವುದು ಸಂತಸದ ವಿಷಯವಾಗಿದೆ. ಇದರ ಧ್ಯೇಯ ಆಂತರಿಕ ಶಾಂತಿ, ಜಾಗತಿಕ ಸದ್ಭಾವನೆಯಾಗಿದೆ. ಪ್ರಸ್ತುತ ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಘರ್ಷಣೆ ಮತ್ತು ಉದ್ವಿಗ್ನತೆ ಹೆಚ್ಚುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ ವಿಶ್ವ ಧ್ಯಾನ ದಿನದ ಮೂಲಕ ಪ್ರತಿಯೊಬ್ಬ ವ್ಯಕ್ತಿಯು ಆತ್ಮವಲೋಕನ ಮಾಡಿಕೊಳ್ಳುತ್ತಾ ಆತ್ಮವಿಶ್ವಾಸ ಮತ್ತು ಆಂತರಿಕ ಶಾಂತಿಯನ್ನು ಪಡೆಯಲು ಪ್ರಯತ್ನಪಡಬೇಕಾಗಿದೆ.

ಈ ಕಾರ್ಯಕ್ರಮವು ಮಾನವ ಜೀವನವನ್ನು ಹೆಚ್ಚು ಸಬಲಗೊಳಿಸಿ ಶಾಂತಿ ಮತ್ತು ಸದ್ಭಾವನೆಯನ್ನು ಜಗತ್ತಿನಲ್ಲಿ ತರಬಲ್ಲದು. ಇದು ಭಾರತದ ಪ್ರಾಚೀನ ತತ್ವವಾದ 'ವಸುಧೈವ ಕುಟುಂಬಕಂ' ಭಾವನೆಯನ್ನು ವಿಶ್ವದಲ್ಲಿ ಜಾಗೃತಗೊಳಿಸಲಿದೆ. ಧ್ಯಾನವು ವ್ಯಕ್ತಿಯ ಮನಸ್ಸಿನ ತರಬೇತಿ ಅಥವಾ ಅರಿವಿನ ಒಂದು ಕ್ರಮವನ್ನು ಉಂಟುಮಾಡುವ ವಿಧಾನ. ಧ್ಯಾನ ಎಂಬ ಪದವು ವಿವಿಧ, ವಿಶಾಲ ಆಚರಣೆಗಳನ್ನು ಸೂಚಿಸುತ್ತದೆ. ಅದು ಕೆಲವು ತಂತ್ರಗಳನ್ನು ಒಳಗೊಂಡಿದ್ದು, ಅವುಗಳು ವಿಶ್ರಾಂತಿ, ಆಂತರಿಕ ಶಕ್ತಿಯನ್ನು ಹೆಚ್ಚಿಸುತ್ತವೆ. ಇದರಿಂದ ಸಹಾನುಭೂತಿ, ಅಭಿವೃದ್ಧಿ, ಪ್ರೀತಿ, ತಾಳ್ಮೆ ಉದಾರತೆ ಮತ್ತು ಕ್ಷಮೆಯಂತಹ ಸದ್ಗುಣಗಳು ವಿಕಾಸವಾಗುತ್ತವೆ.

ಸಾಮಾನ್ಯವಾಗಿ ಬೌದ್ಧ, ಕ್ರೈಸ್ತ, ಹಿಂದೂ, ಇಸ್ಲಾಂ ಧರ್ಮಗಳಲ್ಲಿ ಯೋಗ ಅಥವಾ ಧ್ಯಾನದ ಉಲ್ಲೇಖವಿದೆ. ಪತಂಜಲಿ ಮಹರ್ಷಿಗಳ ಅಷ್ಟಾಂಗ ಸೂತ್ರ, ವೇದ-ಉಪನಿಷತ್ತುಗಳು ಧ್ಯಾನದ ಬಗ್ಗೆ ಮಾಹಿತಿಯನ್ನು ನೀಡುತ್ತವೆ. ವರ್ಷದ ಅತಿ ದೊಡ್ಡ ರಾತ್ರಿ ಮತ್ತು ಕಡಿಮೆ ಹಗಲು ಇರುವ ದಿನವೆಂದರೆ ಡಿಸೆಂಬರ್ 21. ಜಾಗತಿಕವಾಗಿ ನಾವೆಲ್ಲರೂ ಧ್ಯಾನದ ಕಡೆಗೆ ಗಮನಹರಿಸಲು ಇದು ಸೂಕ್ತ ಸಮಯವಾಗಿದೆ.

ಎಲ್ಲಾ ವಿಜ್ಞಾನಗಳಿಗಿಂತ ಭಿನ್ನವಾದ ಇನ್ನೊಂದು ವಿಜ್ಞಾನವಿದೆ. ಅದುವೇ ಧ್ಯಾನ-ಯೋಗ ವಿಜ್ಞಾನ. ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಇದನ್ನು ಪ್ರಾಯೋಗಿಕವಾಗಿ ಕಲಿಸಲಾಗುತ್ತದೆ. ಈ ಸಂಸ್ಥೆಯ ಅಂಗಸಂಸ್ಥೆಯಾದ 'ರಾಜಯೋಗ ಶಿಕ್ಷಣ ಮತ್ತು




ಸಂಶೋಧನೆ ಪ್ರತಿಷ್ಠಾನ'ವು ಯೋಗ-ವಿಜ್ಞಾನವನ್ನು ಪ್ರಚಾರ ಮತ್ತು ಪ್ರಸಾರ ಮಾಡುವ ಕಾರ್ಯದಲ್ಲಿ ನಿರತವಾಗಿದೆ. ಇಲ್ಲಿ ಆತ್ಮ ಮತ್ತು ಪರಮಾತ್ಮನ ನಡುವೆ ಸರ್ವಪ್ರಕಾರದ ಸಂಬಂಧವು ಹೇಗೆ ಜೋಡಿಸಬೇಕು ಎಂಬುದನ್ನು ತಿಳಿಸಲಾಗುತ್ತದೆ.

ಸ್ವಯಂ ಪರಮಾತ್ಮನೇ ಕಲಿಸುವ ರಾಜಯೋಗವು ಅತ್ಯಂತ ಸರಳ ಹಾಗೂ ಸಹಜ. ಇದರಲ್ಲಿ ಮಾನವನ ಪ್ರವೃತ್ತಿಗಳ ಪರಿವರ್ತನೆ ಮತ್ತು ಶುದ್ಧೀಕರಣವಾಗಿ ಅವನ ಆಹಾರ-ವ್ಯವಹಾರಗಳು ಸುಧಾರಣೆಗೊಂಡು ಸಂಸ್ಕಾರಗಳು ಸತೋಪ್ರಧಾನವಾಗುತ್ತವೆ. ಹಾಗಾಗಿ ಸಾಮಾನ್ಯ ಮಾನವನು ದೇವ-ಮಾನವನಾಗುತ್ತಾನೆ. ಯೋಗವೆಂಬ ಈ ವಿಜ್ಞಾನವು ಮನುಷ್ಯನ ಉದ್ವೇಗಗಳನ್ನು ನಿಯಂತ್ರಿಸುತ್ತದೆ. ಅವನ ವಿಚಾರಗಳನ್ನು ವ್ಯವಸ್ಥಿತ ಹಾಗೂ ಸರಳಿತಗೊಳಿಸುತ್ತದೆ. ಈ ವಿಜ್ಞಾನದಿಂದ ವ್ಯಕ್ತಿಯ ಮಾನಸಿಕ ಏಕಾಗ್ರತಾ ಶಕ್ತಿಯು ಹೆಚ್ಚುತ್ತದೆ. ಅಪಾರ ಶಾಂತಿಯ ಅನುಭವ ಆಗುತ್ತದೆ. ಅವನ ವರ್ತನೆಯಲ್ಲಿ ಪರಿವರ್ತನೆಯಾಗಿ ಮನಸ್ತಾಪ, ಈರ್ಷೆ-ದ್ವೇಷ, ಕ್ರೋಧ ಇತರೆ ವಿಕಾರಿ ಗುಣಗಳು ದೂರವಾಗುತ್ತವೆ. ಅವನ ಮನಸ್ಸಿನಲ್ಲಿ ಉದ್ವೇಗಗಳ ಜ್ವಾಲಾಮುಖಿ ಸ್ಫೋಟಗೊಳ್ಳುವುದಿಲ್ಲ. ಮಾನಸಿಕ ಚಿಂತೆ ಇರುವುದಿಲ್ಲ.

ವಿಶ್ವ ಆರೋಗ್ಯ ಸಂಸ್ಥೆಯು ಸಂಪೂರ್ಣ ಶಾರೀರಿಕ, ಮಾನಸಿಕ, ಸಾಮಾಜಿಕ, ಆರೋಗ್ಯವೇ ಆರೋಗ್ಯವೆಂದು ಸಾರಿದೆ. ಕೇವಲ ರೋಗಗಳಿಲ್ಲದಿರುವಿಕೆ ಪರಿಪೂರ್ಣ ಆರೋಗ್ಯವಲ್ಲ ಎಂದು ವ್ಯಾಖ್ಯಾನಿಸಿದೆ. ಬ್ರಹ್ಮಾಕುಮಾರಿ ಸಂಸ್ಥೆಯು ಅಂತಾರಾಷ್ಟ್ರೀಯ ಮಟ್ಟದಲ್ಲಿ ಧ್ಯಾನ ಸಪ್ತಾಹದ ಅಂಗವಾಗಿ ಅನೇಕ ಕಾರ್ಯಯೋಜನೆಗಳನ್ನು ರೂಪಿಸಿದೆ. ಅದರಲ್ಲಿ ಮುಖ್ಯವಾಗಿ ಉಚಿತ ರಾಜಯೊಗ ಶಿಬಿರಗಳು ಸೇರಿವೆ.

**ಸಹಜ ರಾಜಯೋಗದಿಂದಾಗುವ ಲಾಭಗಳು**

ಯೋಗಾವಸ್ಥೆಯಲ್ಲಿ ಶ್ವಾಸೋಚ್ಛ್ವಾಸ ನಿಧಾನವಾಗಿ ನಡೆಯುವುದರಿಂದ ಯೋಗಿಯು ವಿಶ್ರಾಂತಿ ಹಾಗೂ ನೆಮ್ಮದಿಯ ಅನುಭವ ಪಡೆಯುವನು.

ಯೋಗಾವಸ್ಥೆಯಲ್ಲಿ ಯೋಗಿಯ ಶರೀರದಲ್ಲಿ ಸಂಚರಿಸುವ ರಕ್ತದಲ್ಲಿ ಲ್ಯಾಕ್ಟಿಕ್ ಆಮ್ಲದ ಅಂಶವು ಶೀಘ್ರವಾಗಿ ಕೆಳಮಟ್ಟಕ್ಕೆ ಬರುವುದರಿಂದ ಸಂಪೂರ್ಣ ಶಾಂತಿಯ ಅನುಭವವಾಗುವುದು.

ಯೋಗಾವಸ್ಥೆಯಲ್ಲಿ ಮಾನಸಿಕ ಉದ್ವೇಗ ದೂರವಾಗುವುದರಿಂದ ಮಾನವನ ತ್ವಚೆಯಲ್ಲಿ ಅಸಾಧಾರಣ ರೋಗ ನಿರೋಧಕ ಶಕ್ತಿ ಹೆಚ್ಚುತ್ತದೆ.

ಹೃದಯವಿಕಾರ, ರಕ್ತದೊತ್ತಡ, ಮಾನಸಿಕ ಅಶಾಂತಿ, ಅರೆಹುಚ್ಚು, ಕ್ರೋಧ, ಕಾಮ, ಮಾನಸಿಕ ಭಯದಿಂದ ಉಂಟಾದ ರೋಗಗಳೂ ಸಹ ಯೋಗದಿಂದ ಓಡಿ ಹೋಗುತ್ತವೆ.

ಯೋಗದ ಫಲವಾಗಿ ನಾವು ಗಹನ ಶಾಂತಿಯ ಅನುಭವ ನೀಡುತ್ತವೆ. ದುಃಖ, ರೋಗ, ಅಧೈರ್ಯ, ಆಸೆ, ಕಾಮ, ಕ್ರೋಧ, ಲೋಭ, ಮೋಹ, ಅಹಂಕಾರಗಳಾದ ಎಲ್ಲಾ ಮನೋರೋಗಗಳನ್ನು ಶಾಶ್ವತವಾಗಿ ನಿರ್ಮೂಲನೆ ಮಾಡಿ, ಶುದ್ಧ ಸಂಕಲ್ಪದಿಂದ ಸದಾ ಇರಲು ಅತಿ ಸುಲಭವಾದ ಏಕೈಕ ಮಾರ್ಗವೇ ಸಹಜ ರಾಜಯೋಗವಾಗಿದೆ.

– ವಿಶ್ವಾಸ ಸೋಹೋನಿ.
ಬ್ರಹ್ಮಾಕುಮಾರಿಸ್ ಮೀಡಿಯಾ ವಿಂಗ್ಸ್.

### ಬ್ರಹ್ಮ ವಿದ್ಯಾಶ್ರಮದ ಹನುಮಯ್ಯ ತಾತನವರ ಮೌನ ಅನುಷ್ಠಾನ ಮಂಗಲ

# ಧರ್ಮ ಪರಿಪಾಲನೆಯಿಂದ ಜೀವನದಲ್ಲಿ ಶ್ರೇಯಸ್ಸು

■ ವಿಜಯಸಾಕ್ಷಿ ಸುದ್ದಿ, ಲಿಂಗಸುಗೂರು

ಭೌತಿಕ ಬದುಕಿನಲ್ಲಿ ಸುಖ-ದುಃಖ ಮತ್ತು ನೋವು-ನಲಿವು ಬರುವುದು ಸಹಜ. ಆಧ್ಯಾತ್ಮಿಕ ಸನ್ಮಾರ್ಗದಲ್ಲಿ ಶಾಂತಿ, ಸಂತೃಪ್ತಿ ಕಾಣಲು ಸಾಧ್ಯ. ಸತ್ಯ ಶುದ್ಧವಾದ ಧರ್ಮಾಚರಣೆಯಿಂದ ಜೀವನದಲ್ಲಿ ಶ್ರೇಯಸ್ಸು ಕಾಣಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಸರ್ಜಾಪುರ-ಕುಪ್ಪಿಗುಡ್ಡ ಬ್ರಹ್ಮ ವಿದ್ಯಾಶ್ರಮದ ಹನುಮಯ್ಯ ತಾತನವರ ಮೌನ ಅನುಷ್ಠಾನ ಮಂಗಲ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನಿತ್ತ ಅಮೂಲ್ಯ ಕೊಡುಗೆಗೆ ಸರಿಸಾಟಿಯಾದುದು ಇನ್ನೊಂದಿಲ್ಲ. ಬದುಕು ಕೊಟ್ಟ ಭಗವಂತನನ್ನು ಎಷ್ಟು ಸ್ಮರಿಸಿದರೂ ಕಡಿಮೆಯೇ. ಜೀವನದ ಜಂಜಡಗಳಿಂದ ಮುಕ್ತನಾಗಿ ಆತ್ಮ ಜ್ಞಾನವನ್ನು ಪಡೆಯುವ ಗುರಿ ಮನುಷ್ಯನದಾಗಬೇಕು. ತಪಸ್ವಿಗಳ ಸ್ಥಾನಗಳಲ್ಲಿ ವೈರತ್ವ ಪ್ರಾಣಿ-ಜೀವಿಗಳೂ ಕೂಡಾ ಸಾಮರಸ್ಯದಿಂದ ಬಾಳಿದ್ದನ್ನು



ಇತಿಹಾಸದ ಪುಟಗಳಿಂದ ತಿಳಿಯುತ್ತೇವೆ. ಆತ್ಮ ಸಾಕ್ಷಾತ್ಕಾರಕ್ಕಾಗಿ ಶಿವತಪ, ಶಿವಕರ್ಮ, ಶಿವಜಪ, ಶಿವಧ್ಯಾನ ಮತ್ತು ಶಿವಜ್ಞಾನ ಬಹು ಮುಖ್ಯವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ಬೋಧಿಸಿದ್ದಾರೆ ಎಂದರು.

ದೇವರ ಭೂಪುರ ಅಮರೇಶ್ವರ ಗುರು ಅಭಿನವ ಗಜದಂಡ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಮಾತನಾಡಿ, ಸಕಲ ಜೀವಾತ್ಮರಿಗೆ ಒಳಿತನ್ನು ಬಯಸುವುದೇ ಧರ್ಮದ ಗುರಿ. ಗುರು, ಗುರಿಯನ್ನು ಹೊಂದಿ ಬಾಳಿದರೆ ಬದುಕು ಉಜ್ವಲ ಎಂದರು.

ನಂದವಾಡಗಿ ಮಹಾಂತಲಿಂಗ ಶಿವಾಚಾರ್ಯರು. ಸಂತೇಕೆಲ್ಲೂರು

ಹನುಮಯ್ಯ ತಾತನವರು ಮಾತನಾಡಿ, ಮೌನಾಷ್ಠಾನ ಮಂಗಲಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ದಯಮಾಡಿಸಿರುವುದು ಈ ಭಾಗದ ಭಕ್ತರ ಸೌಭಾಗ್ಯವಾಗಿದ್ದು, ಅನುಷ್ಠಾನದ ಫಲ ಸಕಲ ಸದ್ಭಕ್ತರಿಗೆ ಸಲ್ಲುತ್ತದೆ ಎಂದರು.

ಗುರುಬಸವ ಸ್ವಾಮಿಗಳು, ಮಸ್ಕಿ ರುದ್ರಮುನಿ ಶಿವಾಚಾರ್ಯರು, ಅಂಕುಶದೊಡ್ಡಿ ವಾಮದೇವ ಶಿವಾಚಾರ್ಯರು, ಮಿಟ್ಟಿಮಲ್ಕಾಪುರ ನಿಜಾನಂದ ಸ್ವಾಮಿಗಳು, ಲಿಂಗಸುಗೂರು ಮಾತಾ ನಂದಿಕೇಶ್ವರಿ ಅಮ್ಮನವರು, ಶಾಂಭವಿಮಠ, ವೀರಘೋಟ, ಇರಕಲ್ಲಮಠ, ಹುನಕುಂಟಿ ಶ್ರೀಗಳು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಅನ್ವರಿ, ಮಾಜಿ ಶಾಸಕ ಪ್ರತಾಪಗೌಡ ಪಾಟೀಲ, ಪಾಮಯ್ಯ ಮುರಾರಿ, ಅಯ್ಯಪ್ಪ ಮಾಳೂರು, ಶ್ರೀನಿವಾಸ ಅಮ್ಮಾಪುರ, ರತ್ನಮ್ಮ ಸಾಬಣ್ಣ ನಾಯಕ, ರಂಗಮ್ಮ ಮಂಜುನಾಥ ನೆಲೊಗಿ, ಶೋಭಾರಾಣಿ ಭಾಗವಹಿಸಿದ್ದರು.

## ಇಂಜಿನಿಯರಿಂಗ್ ಕ್ಷೇತ್ರದ ಬಗ್ಗೆ ವಿಶೇಷ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಿದ್ಧ ಅಬ್ಬಾಟ್ (Abbot) ಕಂಪನಿಯಲ್ಲಿ ಕಳೆದ 12 ವರ್ಷಗಳಿಂದ ಸೀನಿಯರ್ ಸಾಫ್ಟವೇರ್ ಇಂಜಿನಿಯರ್ ಟೀಮ್ ಲೀಡರ್ ಆಗಿ ಅತ್ಯುತ್ತಮ ಕಾರ್ಯ ನಿರ್ವಹಿಸುತ್ತಿರುವ ಪ್ರತಿಭಾವಂತ ತಾಂತ್ರಿಕ ಶಿಲ್ಪಿ

ಶ್ರುತಿ ಹಬೀಬ್ ಇತ್ತೀಚೆಗೆ ಗದುಗಿನ ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯಕ್ಕೆ ಬೇಟಿ ನೀಡಿದರು.

ಮಹಾವಿದ್ಯಾಲಯದ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡುತ್ತಾ, ಇಂದು ಇಂಜಿನಿಯರಿಂಗ್ ಪದವೀಧರರಿಗೆ ಕೇವಲ ದೇಶದಲ್ಲಿ ಮಾತ್ರವಲ್ಲ, ವಿದೇಶಗಳಲ್ಲೂ



ಭಾರೀ ಬೇಡಿಕೆ ಇದೆ. ಇಂಜಿನಿಯರಿಂಗ್ ಕ್ಷೇತ್ರ ಇಂದು ಮೊದಲಿಗಿಂತಲೂ ವಿಸ್ತಾರವಾಗಿ ಬೆಳೆದು ನಿಂತಿದೆ. ಕಾಲೇಜಿನಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಶ್ರೀ ವಿಶ್ವೇಶ್ವರಯ್ಯನವರಂತೆ, ಕಲ್ಪನಾ ಚಾವ್ಲಾ, ವಿಲಿಯಮ್ಸ್ ಅವರಂತೆನೀವೂ ಸಾಧಕರಾಗಿ ಎಂದು ಹಾರೈಸಿದರು.

ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ಉಡುಪಿ ದೇಶಪಾಂಡೆ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಕಾರ್ಯಾಗಾರವನ್ನುದ್ದೇಶಿಸಿ ಮಾತನಾಡಿದರು.

ಕಾರ್ಯಾಗಾರದಲ್ಲಿ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ, ಪ್ರೊ. ರಾಹುಲ ಒಡೆಯರ, ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯ್ಯದ್ ಮತಿನ್ ಮುಲ್ಲಾ, ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ಸಂತೋಷ ನಾಗರಾಳ ಸ್ವಾಗತಿಸಿದರೆ, ಪ್ರೊ. ರಾಧಿಕಾ ಪಾಟೀಲ ವಂದಿಸಿದರು.

## ಪ್ರತಿಭಟನೆ ವೇಳೆ ಇಬ್ಬರು ಕಾಂಗ್ರೆಸ್ ಕಾರ್ಯಕರ್ತರು ಸಾವು : ಪೊಲೀಸ್ ದೌರ್ಜನ್ಯ ಆರೋಪ

■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶ ಮತ್ತು ಅಸ್ಸಾಂನಲ್ಲಿ ಪ್ರತಿಭಟನೆ ವೇಳೆ ಇಬ್ಬರು ಕಾಂಗ್ರೆಸ್ ಕಾರ್ಯಕರ್ತರು ಬುಧವಾರ (ಡಿ.18) ಸಾವನ್ನಪ್ಪಿದ್ದಾರೆ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಪೊಲೀಸ್ ದೌರ್ಜನ್ಯದಿಂದ ನಮ್ಮ ಕಾರ್ಯಕರ್ತರು ಮೃತಪಟ್ಟಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿದೆ. ಆದರೆ, ಅಧಿಕಾರಿಗಳು ಈ ಆರೋಪವನ್ನು ತಳ್ಳಿ ಹಾಕಿದ್ದಾರೆ.

"ಬಿಜೆಪಿ ಆಡಳಿತದ ಅಸ್ಸಾಂ ಮತ್ತು ಉತ್ತರ ಪ್ರದೇಶದಲ್ಲಿ ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಮತ್ತೆ ಕೊಲೆ ಮಾಡಲಾಗಿದೆ. ಪೊಲೀಸ್ ದೌರ್ಜನ್ಯದಿಂದ ನಮ್ಮ ಪಕ್ಷದ ಕಾರ್ಯಕರ್ತರು ಸಾವನ್ನಪ್ಪಿದ್ದಾರೆ" ಎಂದು ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ.


ನಿರಂಕುಶ ಆಡಳಿತ ಪ್ರತಿಭಟನೆಗಳನ್ನು ಹತ್ತಿಕ್ಕಲು ಕ್ರೂರ ಪೊಲೀಸ್ ಬಲವನ್ನು ಬಳಸಿರುವುದು ನಮ್ಮ ದೇಶಭಕ್ತ ಕಾರ್ಯಕರ್ತರ ದುರಂತ ಸಾವಿಗೆ ಕಾರಣ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ.

ಅಸ್ಸಾಂನ ಗುವಾಹಟಿಯಲ್ಲಿ ಸಾವನ್ನಪ್ಪಿದ ಕಾಂಗ್ರೆಸ್ ಸದಸ್ಯನನ್ನು ಮೃದುಲ್ ಇಸ್ಲಾಂ ಮತ್ತು ಉತ್ತರ ಪ್ರದೇಶದ ಲಕ್ನೋದಲ್ಲಿ ಸಾವನ್ನಪ್ಪಿದವರನ್ನು ಪ್ರಭಾತ್ ಪಾಂಡೆ ಎಂದು ಗುರುತಿಸಲಾಗಿದೆ.

ಕೇಂದ್ರ ಸರ್ಕಾರ ಕೈಗಾರಿಕೋದ್ಯಮಿ ಗೌತಮ್ ಅದಾನಿಗೆ ಪರ ಒಲವು ತೋರುತ್ತಿದೆ ಎಂದು ಆರೋಪಿಸಿ ಮತ್ತು ಮಣಿಪುರದ ಜನಾಂಗೀಯ ಹಿಂಸಾಚಾರದ ವಿರುದ್ಧ ಅಸ್ಸಾಂ ಗುವಾಹಟಿಯಲ್ಲಿ ಬುಧವಾರ ಕಾಂಗ್ರೆಸ್ ಪ್ರತಿಭಟನೆ ಹಮ್ಮಿಕೊಂಡಿತ್ತು. ರಾಜ್ಯಪಾಲರ ಅಧಿಕೃತ ನಿವಾಸವಾದ ಗುವಾಹಟಿ ರಾಜಭವನದ ಕಡೆಗೆ ಮೆರವಣಿಗೆ ನಡೆಸುತ್ತಿದ್ದ ಸುಮಾರು 1,000 ಪ್ರತಿಭಟನಾಕಾರರಲ್ಲಿ ಮೃದುಲ್ ಇಸ್ಲಾಂ ಕೂಡ ಇದ್ದರು ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

## ಹೆಚ್ಚು ಹಣ ಖರ್ಚು ಮಾಡಲಾಗಿದೆ ಎಂಬ ಕಾರಣಕ್ಕೆ ಅಕ್ರಮ ಕಟ್ಟಡ ಕಾನೂನುಬದ್ಧವಾಗಲ್ಲ : ಸುಪ್ರೀಂಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಅಕ್ರಮ ಕಟ್ಟಡಗಳ ವಿರುದ್ಧ ಕ್ರಮ ಕೈಗೊಳ್ಳಲು ವಿಳಂಬವಾಗಿದೆ ಎಂಬ ಕಾರಣಕ್ಕೆ ಅಥವಾ ಕಟ್ಟಡಗಳನ್ನು ನಿರ್ಮಿಸಲು ಹೆಚ್ಚಿನ ಮೊತ್ತದ ಹಣವನ್ನು ವ್ಯಯಿಸಲಾಗಿದೆ ಎಂಬ ಕಾರಣಕ್ಕೆ ಅದನ್ನು ಕಾನೂನುಬದ್ಧಗೊಳಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಂಗಳವಾರ ಹೇಳಿದೆ. ಉತ್ತರ ಪ್ರದೇಶದ ಮೀರತ್‌ನಲ್ಲಿ ವಸತಿ ಪ್ಲಾಟ್‌ನ ಅನಧಿಕೃತ ವಾಣಿಜ್ಯ ಕಟ್ಟಡಗಳ ನೆಲಸಮವನ್ನು ಎತ್ತಿಹಿಡಿದ ನ್ಯಾಯಾಲಯವು, ಈ ವೇಳೆ ಮಾರ್ಗಸೂಚಿಗಳನ್ನು ಜಾರಿಗೊಳಿಸಿದೆ. ಹೆಚ್ಚು ಹಣ ಖರ್ಚು ಮಾಡಲಾಗಿದೆ

ನ್ಯಾಯಮೂರ್ತಿಗಳಾದ ಜೆ.ಬಿ.ಪರ್ದಿವಾಲಾ ಮತ್ತು ಆರ್. ಮಹಾದೇವನ್ ಅವರನ್ನೊಳಗೊಂಡ ಪೀಠವು ನಗರ ಯೋಜನಾ ಕಾನೂನುಗಳನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು ಮತ್ತು ಅನಧಿಕೃತ ಕಟ್ಟಡಗಳಿಗೆ ಅನುಮತಿ ನೀಡುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಹೇಳಿದೆ. ಹೆಚ್ಚು ಹಣ ಖರ್ಚು ಮಾಡಲಾಗಿದೆ

"ಸ್ಥಳೀಯ ಪ್ರಾಧಿಕಾರವು ಅನುಮೋದಿಸಿದ ಕಟ್ಟಡದ ಯೋಜನೆಯನ್ನು ಉಲ್ಲಂಘಿಸುವ ಅಥವಾ ವಿಚಲನಗೊಳಿಸುವ ನಿರ್ಮಾಣ (ಗಳು) ಮತ್ತು ಯಾವುದೇ ಕಟ್ಟಡದ ಯೋಜನೆ ಅನುಮೋದನೆಯಿಲ್ಲದೆ ನಿರ್ಮಿಸಲಾದ ನಿರ್ಮಾಣಗಳನ್ನು ಪ್ರೋತ್ಸಾಹಿಸುವುದಿಲ್ಲ ಎಂದು ನಾವು ಅಭಿಪ್ರಾಯಪಟ್ಟಿದ್ದೇವೆ" ಎಂದು ನ್ಯಾಯಾಲಯ ಹೇಳಿದೆ. ಪ್ರತಿಯೊಂದು ನಿರ್ಮಾಣವನ್ನು ಸೂಕ್ಷ್ಮವಾಗಿ ಅನುಸರಿಸಬೇಕು ಮತ್ತು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಇದೇ ವೇಳೆ ಕೋರ್ಟ್ ಹೇಳಿದೆ.

ಯಾವುದೇ ನಿಯಮಗಳ ಉಲ್ಲಂಘನೆಯನ್ನು ನ್ಯಾಯಾಲಯದ ಗಮನಕ್ಕೆ ತಂದರೆ, ಅಕ್ರಮವನ್ನು ತೀವ್ರವಾಗಿ ತಡೆಯಬೇಕು ಎಂದು ಪೀಠ ಹೇಳಿದೆ. ಕಾನೂನು ಉಲ್ಲಂಘಿಸುವವರಿಗೆ ತೋರುವ ಯಾವುದೇ ಮೃದುತ್ವವು "ತಪ್ಪಾದ ಸಹಾನುಭೂತಿ" ಆಗಿದೆ ಎಂದು ಅದು ಹೇಳಿತ್ತು. ಅನಧಿಕೃತ ನಿರ್ಮಾಣಗಳು ಜೀವಕ್ಕೆ ಅಪಾಯವನ್ನುಂಟುಮಾಡುವುದರ ಜೊತೆಗೆ "ವಿದ್ಯುತ್, ಅಂತರ್ಜಲ ಮತ್ತು ರಸ್ತೆಗಳಂತಹ ಸಂಪನ್ಮೂಲಗಳ ಮೇಲೆ ಪರಿಣಾಮ ಬೀರುತ್ತವೆ" ಎಂದು ದ್ವಿಸದಸ್ಯ ಪೀಠ ಹೇಳಿದೆ.

## ಕಥೆ ಹೇಳುವ ಸ್ಪರ್ಧೆಯಲ್ಲಿ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ಜಿಲ್ಲಾ ಪಂಚಾಯಿತಿ, ಮುಂಡರಗಿ ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ ಮುಂಡರಗಿ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ ಮುಂಡರಗಿ ತಾಲೂಕಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಲ್ಲಿ ಕಥೆ ಹೇಳುವ ಸ್ಪರ್ಧೆಯಲ್ಲಿ ಇಲ್ಲಿನ ಡಿಪಿಇಪಿ ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ಗೌಸಿದ್ಧಪ್ಪ ಹಳ್ಳಾಕಾರ ಪ್ರಥಮ ಸ್ಥಾನ ಪಡೆದಿದ್ದಾಳೆ.

ಸಾಧಕ ವಿದ್ಯಾರ್ಥಿನಿಗೆ ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಗೌಸಿದ್ಧಪ್ಪ ಹಾದಿಮನಿ, ಮುಖ್ಯೋಪಾಧ್ಯಾಯರಾದ ಎಸ್.ಜಿ. ಪಾಟೀಲ್, ಎಸ್‌ಡಿಎಂಸಿ ಸದಸ್ಯರು, ಗ್ರಾಮದ ಹಿರಿಯರು ಅಭಿನಂದಿಸಿದ್ದಾರೆ.

## ವಕ್ಫ್ ಮತದಾರರ ನೋಂದಣಿ ಪ್ರಕ್ರಿಯೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ-ಬೆಟಗೇರಿ ಅಂಜುಮನ್ ಏ ಇಸ್ಲಾಂ ಕಮಿಟಿ ವಕ್ಫ್ ಸಂಸ್ಥೆಯ ಕರ್ನಾಟಕ ರಾಜ್ಯ ವಕ್ಫ್ ನಿಯಮ-2017ರ ಪ್ರಕಾರ ಬೈಲಾ ಅನುಮೋದನೆಗೊಂಡಿದ್ದು, ಗದಗ ಜಿಲ್ಲಾ ವಕ್ಫ್ ಸಲಹಾ ಸಮಿತಿ ಸಭೆಯಲ್ಲಿ ಸದರಿ ಸಂಸ್ಥೆಗೆ ಚುನಾವಣೆ ಜರುಗಿಸಲು ಚುನಾವಣಾಧಿಕಾರಿಯನ್ನು ನೇಮಕ ಮಾಡಲಾಗಿದೆ. ಸದರಿ ವಕ್ಫ್ ಸಂಸ್ಥೆಯ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಆದಷ್ಟು ಬೇಗ ಪ್ರಾರಂಭಿಸಲಾಗುವುದು ಎಂದು ಜಿಲ್ಲಾ ವಕ್ಫ್ ಸಲಹಾ ಸಮಿತಿ ಅಧ್ಯಕ್ಷರಾದ ಜಿ.ಎಂ. ದಂಡಿನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ಅಂಗಾಂಗ ದಾನ ಜಾಗೃತಿ' ಕಾರ್ಯಾಗಾರದಲ್ಲಿ ಪ್ರಾ. ಜೈಹನುಮಾನ ಎಚ್.ಕೆ

# ದುಡ್ಡಿಗಾಗಿ ಅಂಗಾಂಗಗಳ ಮಾರಾಟಕ್ಕೆ ಮುಂದಾಗದಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಒಂದು ಜೀವವನ್ನು ಬದುಕಿಸಲು ಮತ್ತೊಂದು ಮುಗ್ಧ ಜೀವವನ್ನು ಬಲಿ ತಗೆದುಕೊಳ್ಳುವ ಪದ್ಧತಿ ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಿಂದಿನಿಂದಲೂ ನಡೆಯುತ್ತಿದೆ. ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾನೂನುಗಳು ಜಾರಿಯಾಗಿದ್ದು, ಯಾರಾದರೂ ದುಡ್ಡಿಗಾಗಿ ದೇಹದ ಅಂಗಾಂಗಗಳ ಮಾರಾಟಕ್ಕೆ ಮುಂದಾದರೆ ಕಠಿಣ ಶಿಕ್ಷೆ ವಿಧಿಸಲಾಗುತ್ತಿದೆ ಎಂದು ಪ್ರಾಚಾರ್ಯ ಜೈಹನುಮಾನ ಎಚ್.ಕೆ ಹೇಳಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಗುರುವಾರ ಯೂತ್ ರೆಡ್ ಕ್ರಾಸ್ ಹಾಗೂ ಕೆ.ಎಚ್. ಪಾಟೀಲ ಕಿಡ್ನಿ ಕೇರ್ ಸಂಯುಕ್ತಾಶ್ರಯದಲ್ಲಿ ನಡೆದ 'ಅಂಗಾಂಗ ದಾನ ಜಾಗೃತಿ' ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಮಾನವ ಅಂಗ ಕಸಿ ಕಾಯಿದೆ-1994ರ ಪ್ರಕಾರ ಅಂಗಾಂಗ ಮಾರಾಟ ನಿಷೇಧಿಸಲಾಗಿದ್ದು, ಅಕ್ರಮ ಎಸಗಿದವರ ವಿರುದ್ಧ 5ರಿಂದ 10 ವರ್ಷ ಕಠಿಣ ಶಿಕ್ಷೆ ಮತ್ತು 20ಲಕ್ಷದಿಂದ ಒಂದು ಕೋಟಿ ರೂಪಾಯಿಗಳವರೆಗೂ ದಂಡ ವಿಧಿಸಲಾಗುವುದು. ಹೀಗಾಗಿ ಅಂಗಾಂಗ ಮಾರಾಟಕ್ಕೆ ಅವಕಾಶವಿಲ್ಲ. ಕ್ಯಾನ್ಸರ್, ಎಚ್.ಐ.ವಿ ಕಾಯಿಲೆ ಇರುವವರನ್ನು ಹೊರತುಪಡಿಸಿ, ವಯಸ್ಸು, ಲಿಂಗ, ಧರ್ಮದ ನಿರ್ಬಂಧವಿಲ್ಲದೆ ಯಾರು ಬೇಕಾದರೂ ದಾನಿಯಾಗಬಹುದು ಎಂದರು.




ಕೆ.ಎಚ್. ಪಾಟೀಲ ಕಿಡ್ನಿ ಕೇರ್ ಸಂಸ್ಥೆಯ ಲೀಡ್ ಸರ್ಜನ್ ಮತ್ತು ಕಾರ್ಯಕ್ರಮದ ನಿರ್ದೇಶಕ ಡಾ. ಅವಿನಾಶ ಓದುಗೌಡರ ಮಾತನಾಡಿ, ಮನುಷ್ಯನ ಮರಣದ ನಂತರ ಕೂಡ ಅವನ ಕೆಲವೊಂದು ಅಂಗಾಂಗಗಳು ಇನ್ನೊಬ್ಬ ವ್ಯಕ್ತಿಯ ಶರೀರದಲ್ಲಿದ್ದು, ಜೀವಿಸುವ ಅಕಾಶ ಇದೆ. ಆದರೆ, ಯಾವುದೇ ರೀತಿಯ ಅಕ್ರಮ ಹಾಗೂ ಹಣಕ್ಕಾಗಿ ಅಂಗಾಂಗಗಳನ್ನು ದಾನ ಮಾಡದೇ ಅಗತ್ಯವಿರುವ ರೋಗಿಗಳಿಗೆ ತಾವು ಮರಣದ ನಂತರ ಅಂಗಾಂಗಗಳನ್ನು ದಾನ ಮಾಡಬಹುದು. ಇಲ್ಲಿ ಯಾವುದೇ ಸ್ವಾರ್ಥ ಮನೋಭಾವನೆ ಇಲ್ಲದೆ ನಿಸ್ವಾರ್ಥ ಸೇವೆ ಸಲ್ಲಿಸುವ ಅವಕಾಶವು ದೊರೆತಿದೆ. ಸತ್ತ ನಂತರ ದೇಹ ಮಣ್ಣಾಗುವ ಅಥವಾ ಸುಟ್ಟು ಬೂದಿಯಾಗುವ ಬದಲು ಮತ್ತೊಬ್ಬರ ದೇಹದಲ್ಲಿ ಬದುಕುಳಿಯಲು ಅವಕಾಶವಿದೆ. ಹೀಗಾಗಿ ಕಾನೂನು ವಿದ್ಯಾರ್ಥಿಗಳು ಸಮಾಜದಲ್ಲಿ ಈ ವಿಷಯಗಳ ಕುರಿತು ಜಾಗೃತಿ ಮೂಡಿಸಲು ಮುಂದಾಗಬೇಕು ಎಂದರು.

ಜೀವಿಸಲು ಒಂದು ಕಿಡ್ನಿ ಸಾಕು ಮತ್ತು ವ್ಯಕ್ತಿ ಯಕೃತ್ತಿನ ಅಲ್ಪ ಭಾಗವನ್ನು ದಾನ ನೀಡಿದರೆ, ಈ ಭಾಗ ಮೂರು ವಾರದಲ್ಲಿ ಪುನರುತ್ಪತ್ತಿ ಆಗುತ್ತದೆ. ಅಂಗಾಂಗ ದಾನ ಮಾಡಿದರೆ ದೇಹ ವಿರೂಪಗೊಳ್ಳುವುದಿಲ್ಲ. ಹೀಗಾಗಿ ದಾನದ ಬಳಿಕ ಶವಸಂಸ್ಕಾರದ ವಿಧಿ-ವಿಧಾನಕ್ಕೆ ಯಾವುದೇ ಅಡ್ಡಿಯಾಗುವುದಿಲ್ಲ ಎಂಬ ಮನವರಿಕೆ ಮಾಡಬೇಕು ಎಂದು ಜೈಹನುಮಾನ ಎಚ್.ಕೆ ತಿಳಿಸಿದರು.

ಸ್ಥಳೀಯ ಆಡಳಿತ ಮಂಡಳಿಯ ಚೇರಮನ್ ಎಸ್.ಎ. ಮಾನ್ವಿ, ಡಾ. ಪಿ. ನೂರಾಣಿ, ಜೆ.ಟಿ ಕಾಲೇಜಿನ ಪ್ರಾಚಾರ್ಯ ಪಿ.ಜಿ. ಪಾಟೀಲ, ಉಪನ್ಯಾಸಕ ಡಾ. ವಿಜಯ ಮುರದಂಡೆ, ಡಾ. ಜ್ಯೋತಿ ಸಿ.ವಿ, ಡಾ. ಶ್ರೀನಿವಾಸ ಪಾಲ್ಕೊಂಡ, ಶರತ್ ದರಬಾರೆ ಸೇರಿದಂತೆ ಇತರರಿದ್ದರು. ದೈಹಿಕ ನಿರ್ದೇಶಕ ಹಾಗೂ ಯೂತ್ ರೆಡ್ ಕ್ರಾಸ್ ಸಂಯೋಜಕ ಡಾ. ಸಿ.ಬಿ. ರಣಗಟ್ಟಿಮಠ ಸ್ವಾಗತಿಸಿದರು. ವಿದ್ಯಾರ್ಥಿ ಚೈತ್ರಾ ಗೌಡರ ನಿರೂಪಿಸಿದರು.

# ಹೃದಯಸ್ಪರ್ಶಿ ಸ್ನೇಹಮಿಲನ, ಗುರುವಂದನಾ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕಡಕೋಳದ ಶ್ರೀ ಚನ್ನಪ್ಪ ವೀರಪ್ಪ ಅಂಗಡಿ ಕರ್ನಾಟಕ ಪಬ್ಲಿಕ್ ಸ್ಕೂಲ್‌ನಲ್ಲಿ ಹಳೆಯ ವಿದ್ಯಾರ್ಥಿಗಳ ಹೃದಯಸ್ಪರ್ಶಿ ಸ್ನೇಹಮಿಲನ ಕಾರ್ಯಕ್ರಮ ನೆರವೇರಿತು.

ಶಾಲೆಯಲ್ಲಿ 2002-03ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮುಗಿಸಿದ್ದ ಹಳೇ ವಿದ್ಯಾರ್ಥಿಗಳು ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಸೇರಿದ್ದ ಹಳೆಯ ಸ್ನೇಹಿತರೆಲ್ಲರೂ ತಮ್ಮ ಶಾಲಾ ದಿನಗಳನ್ನು ನೆನಪಿಸಿಕೊಂಡರು. ಬಾಲ್ಯದ ಆಟಗಳನ್ನು ನೆನೆದು ಪುಳಕಿತಗೊಂಡರು. ಪರಸ್ಪರ ತಮ್ಮ ಸಾಧನೆಗಳನ್ನು ಹೇಳಿಕೊಂಡರು. ತಮ್ಮ ಗುರುಗಳಿಗೆ ಗೌರವ ಪೂರ್ವಕ ಕೃತಜ್ಞತೆಯೊಂದಿಗೆ ಗುರುವಂದನೆ ಸಲ್ಲಿಸಿ ಕೃತಾರ್ಥರಾದರು.



ತಾವು ಗಳಿಸಿದ ಪದವಿ ಹಾಗೂ ತಾವು ಮಾಡುವ ಕೆಲಸದ ಕುರಿತು ಕಿರಿಯರಿಗೆ ವಿಸ್ತಾರವಾಗಿ ಹೇಳಿದರು. ತಾವು ನಡೆದ ಬಂದ ದಾರಿಯನ್ನು ಅದಕ್ಕೆ ತಮ್ಮ ಶಿಕ್ಷಕರು ನೀಡಿದ ಸಂಸ್ಕಾರವನ್ನು ಕೂಡ ಸ್ಮರಿಸಿಕೊಂಡರು. ಕಾರ್ಯಕ್ರಮದಲ್ಲಿ ಹಳೆಯ ವಿದ್ಯಾರ್ಥಿಗಳು, ಕಾಲೇಜಿನ ಪ್ರಾಚಾರ್ಯರು, ಶಿಕ್ಷಕರು, ಉಪ ಪ್ರಾಂಶುಪಾಲರು, ಮುಂಡರಗಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ. ಫಡ್ನೇಶಿ, ಅಂತೂರ-ಬೆಂತೂರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಶಿವಾನಂದ ದೊಡ್ಡಣ್ಣವರ, ನವಲಗುಂದ ತಾಲೂಕು ಶಿರೂರಿನ ಎನ್.ಜಿ. ಬಾಳನಗೌಡರ ಸರಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಡಾ. ಭಾಗ್ಯಜ್ಯೋತಿ ಕೋಟಿಮಠ, ಶಾಲೆಯ ಭೂದಾನಿಗಳಾದ ಬಾಬಣ್ಣ ಶೆಟ್ರು ಅಂಗಡಿ, ತಿಪ್ಪಣ್ಣ ಕೊಂಚಿಗೇರಿ, ಊರಿನ ಗುರು-ಹಿರಿಯರು ಭಾಗವಹಿಸಿದ್ದರು.

## ಅಂಬೇಡ್ಕರ್ ವಿರೋಧಿ ಹೇಳಿಕೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಅವರ ಡಾ. ಅಂಬೇಡ್ಕರ್ ವಿರೋಧಿ ಹೇಳಿಕೆಯನ್ನು ಖಂಡಿಸಿ ದ.ಸಂ.ಸ. ಒಕ್ಕೂಟ ದಲಿತ ಪ್ರಗತಿಪರ ಸಂಘಟನೆಗಳು ಗದಗ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.




ದಲಿತ ಮುಖಂಡ ಬಸವರಾಜ್ ಎಂ.ಕಡೇಮನಿ ಮಾತನಾಡಿ, ಸೂರ್ಯ-ಚಂದ್ರರು ಇರುವವರೆಗೂ ಡಾ. ಬಿ.ಆರ್. ಅಂಬೇಡ್ಕರ್ ಕೊಟ್ಟ ಸಂವಿಧಾನವನ್ನು ಸರಿ ಕಾಪಾಡುವ ಜವಾಬ್ದಾರಿ ನಮ್ಮೆಲ್ಲರದು ಎಂದು ಹೇಳಿದರು.

ಶರೀಫ ಬಿಳಿಯಲಿ, ರಮೇಶ ಚಲವಾದಿ ಮಾತನಾಡಿ, ಕೇಂದ್ರ ಗೃಹ ಸಚಿವರು ಅಜ್ಞಾನದಿಂದ ಮಾತನಾಡಿ ದಲಿತ ವಿರೋಧಿ, ಅಂಬೇಡ್ಕರ ವಿರೋಧಿ ಎಂದು ತಮ್ಮನ್ನು ತಾವು ತೋರಿಸಿಕೊಟ್ಟಿದ್ದಾರೆ ಎಂದರು.

ಅಶೋಕ ಬರಗುಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಸಂಘಟನೆಗಳ ಪ್ರಮುಖರಾದ ಬಾಲರಾಜ ಅರಬರ, ನಾಗರಾಜ ಗೋಕಾವಿ, ಚಂದ್ರಕಾಂತ ಚವ್ಹಾಣ, ರಮೇಶ ಕಡೇಮನಿ, ವಿರುಪಾಕ್ಷ ರಾಮಗಿರಿ, ಆನಂದ ಸಿಂಗಾಡಿ, ಮಲಕಪ್ಪ ಕಾಳೆ, ಮಂಜುನಾಥ ಮುಳಗುಂದ, ಯೂಸೂಫ ನಮಾಜಿ, ವಿನಾಯಕ ಬಳ್ಳಾರಿ, ಮುತ್ತು ಬಿಳೆಯಲಿ, ಪರಮೇಶ ಕಾಳೆ, ಕೆಂಚಪ್ಪ ಮ್ಯಾಗೇರಿ, ಮುತ್ತಪ್ಪ ಭಜಂತ್ರಿ, ಮಾರುತಿ ಅಂಗಡಿ, ಸಂತೋಷ ಬಣಕಾರ, ಶ್ರೀಕಾಂತ ಮಳಲಿ, ಮಂಜು ಚಲವಾದಿ, ಪೂಜಾ ಬೇವೂರ, ಗಣೇಶ ಹುಬ್ಬಳ್ಳಿ, ಶಿವು ತಮ್ಮಣ್ಣವರ, ಡಿ.ಎಲ್. ಬಣಕಾರ, ಗುರಪ್ಪ ಬಿಳೆಯಲಿ, ಅನಿಲ ಕಾಳೆ, ಪರಶುರಾಮ ಬಿಳೆಯಲಿ, ಹೊನ್ನಪ್ಪ ಸಾಕಿ, ಲಕ್ಷ್ಮಣ ವಡ್ಡರಕಲ್ಲ, ಶಾಕೀರ ಕಾತರಗಿ, ಶಾರುಖ ಹುಯಿಲಗೋಳ, ಶೌಕತಅಲಿ ಕಾತರಕಿ, ಮುನ್ನಾ ಮುಲ್ಲಾನವರ ಮುಂತಾದವರಿದ್ದರು.

## ಅಮಿತ್ ಶಾ ರಾಜೀನಾಮೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಸದನದಲ್ಲಿ ಮಾತನಾಡುವಾಗ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಸಂಬದ್ಧ ಹೇಳಿಕೆ ನೀಡಿದ್ದಾರೆ. ಇಂತಹ ಅಮಾನವೀಯ ಮತ್ತು ಅಸಂಬದ್ಧ ಹೇಳಿಕೆ ನೀಡಿದ ಅಮಿತ್ ಶಾ ಕೂಡಲೇ ರಾಜೀನಾಮೆ ನೀಡಬೇಕು ಎಂದು ಗದಗ-ಬೆಟಗೇರಿ ಶಹರ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಎಚ್.ಎ. ಶಾರುಖ್ ಒತ್ತಾಯಿಸಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗೃಹ ಸಚಿವರ ಮನೋಭಾವನೆ ಜಾತೀಯತೆ, ತಾರತಮ್ಯ ಮಾಡುವ ಉದ್ದೇಶದಿಂದ ಕೂಡಿದೆ. ಪ್ರಜಾಪ್ರಭುತ್ವ ಸಿದ್ಧಾಂತ ಪ್ರತಿಪಾದಕ ನಾಯಕನಿಗೆ ಅವಮಾನ ಮಾಡುವ ಮತ್ತು ಪ್ರಜಾಪ್ರಭುತ್ವ, ಮಾನವೀಯತೆ ವ್ಯವಸ್ಥೆ ಮೇಲೆ ನಂಬಿಕೆ ಇಟ್ಟ ಸಮುದಾಯದ ಭಾವನೆಗೆ ಧಕ್ಕೆ ತರುವಂತಿದೆ ಎಂದಿದ್ದಾರೆ.




ಗದುಗಿನ ಸಿದ್ದಲಿಂಗೇಶ್ವರ ನಗರದ ಬಸವೇಶ್ವರ ಪ್ರೌಢಶಾಲೆಯಲ್ಲಿ ನಡೆದ ಗದಗ ತಾಲೂಕು ಮಟ್ಟದ ಪ್ರತಿಭಾ ಕಾರಂಜಿಯ ಧಾರ್ಮಿಕ ಪಠಣ ಸ್ಪರ್ಧೆಯಲ್ಲಿ ವಿಜಯ ಪ್ರಾಥಮಿಕ ಶಾಲೆಯ 1ನೇ ತರಗತಿ ವಿದ್ಯಾರ್ಥಿ ನಮನ ಸೊಂಡೂರು ದ್ವಿತೀಯ ಸ್ಥಾನವನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾನೆ. ಈತನಿಗೆ ಸಂಸ್ಥೆಯ ಅಧ್ಯಕ್ಷ ಅಶೋಕ ಅಕ್ಕಿ, ಕಾರ್ಯದರ್ಶಿ ಸಂತೋಷ ಅಕ್ಕಿ, ಮುಖ್ಯಸ್ಥರಾದ ಸಾಗರಿಕಾ ಅಕ್ಕಿ, ಮುಖ್ಯೋಪಾಧ್ಯಾಯೆ ರೇಷ್ಮಾ ಚೆನ್ನಪ್ಪಗೌಡ್ರು ಹಾಗೂ ಗುರುವೃಂದದವರು ಅಭಿನಂದಿಸಿದ್ದಾರೆ.

# ಮಣ್ಣಿನ ಪಾತ್ರೆಗಳು ಆರೋಗ್ಯಕ್ಕೆ ಉತ್ತಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಎಸ್‌ಟಿಪಿಎಂಬಿ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಮಣ್ಣಿನಿಂದ ತಯಾರಿಸಿದ ವಸ್ತುಗಳಿಂದ ಆಗುವ ಪ್ರಯೋಜನಗಳ ಬಗ್ಗೆ ಪ್ರಾಯೋಗಿಕವಾಗಿ ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಪಟ್ಟಣದ ಜೋಳದ ಪೇಟೆಯ ಹತ್ತಿರವಿರುವ ಮಣ್ಣಿನ ಮಡಿಕೆಗಳು ಸೇರಿದಂತೆ ವಿವಿಧ ವಸ್ತುಗಳನ್ನು ಸಿದ್ಧಪಡಿಸುವ ಕುಂಬಾರ ಕುಟುಂಬದವರ ಮನೆಗಳಿಗೆ ವಿದ್ಯಾರ್ಥಿಗಳೊಂದಿಗೆ ಶಿಕ್ಷಕರು ತೆರಳಿ ಮಕ್ಕಳಿಗೆ ಮಣ್ಣಿನಿಂದ ಮಾಡಿದ ವಸ್ತುಗಳಿಂದ ಆಗುವ ಪ್ರಯೋಜನಗಳ ಬಗ್ಗೆ ಪ್ರಾಯೋಗಿಕವಾಗಿ ತಿಳಿಸಲಾಯಿತು. ಮಡಿಕೆಗಳನ್ನು ಸಿದ್ಧಪಡಿಸುವ ವಿರುಪಾಕ್ಷಪ್ಪ ಕುಂಬಾರ ಮಕ್ಕಳಿಗೆ ಮಾಹಿತಿ ನೀಡಿ ಮಾತನಾಡಿ, ಇಂದಿನ ಕಾಲದಲ್ಲಿ ಮಣ್ಣಿನ ಪಾತ್ರೆಗಳ ಮಹತ್ವ ಕಡಿಮೆಯಾಗುತ್ತಿದೆ. ಮಣ್ಣಿನಲ್ಲಿರುವ ಶಕ್ತಿಯ ಬಗ್ಗೆ ಜನರಲ್ಲಿ ಮೊದಲಿನಂತೆ ತಿಳುವಳಿಕೆ ಇಲ್ಲದಂತಾಗಿದೆ. ಹಿಂದಿನ ಹಿರಿಯರು ಮಣ್ಣಿನ ಮಡಿಕೆಗಳಲ್ಲಿ ಅಡುಗೆಯನ್ನು ಮಾಡಿ ತಿನ್ನುತ್ತಿದ್ದರು. ಇದು ಆರೋಗ್ಯಕ್ಕೂ ಸಹ ಉತ್ತಮವಾಗಿರುತ್ತದೆ. ಇವುಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಶಿಕ್ಷಕರು ಉತ್ತಮ ಕಾರ್ಯ ಮಾಡತ್ತಿದ್ದಾರೆ ಎಂದು ಹೇಳಿದರು.



ಶಿಕ್ಷಕ ಎಚ್.ಎಮ್. ಕೊಂಡಾಬಂಗಿ ಮಾತನಾಡಿ, ಮಕ್ಕಳಿಗೆ 3ನೇ ತರಗತಿಯ ಪರಿಸರ ಅಧ್ಯಯನ ಪುಸ್ತಕದಲ್ಲಿ ಮಡಿಕೆ ಮಹತ್ವ ಎಂಬ ಪಾಠ ಇದ್ದು, ಮಣ್ಣಿನ ವಸ್ತುಗಳ ಬಗ್ಗೆ ಪ್ರಾಯೋಗಿಕವಾಗಿ ತೋರಿಸಲು ಇಂತಹ ವಿನೂತನ ಕಾರ್ಯಕ್ರಮಕ್ಕೆ ಮುಂದಾಗಿದ್ದೇವೆ. ಫ್ರಿಡ್ಜ್‌ನಲ್ಲಿಟ್ಟಿರುವ ನೀರು ಕುಡಿಯುವದರಿಂದ ಆರೋಗ್ಯದ ಮೇಲೆ ಅಪಾಯ ಉಂಟಾಗುತ್ತದೆ. ಆದರೆ ಅದೇ ನೀರನ್ನು ಮಣ್ಣಿನ ಮಡಿಕೆಯಲ್ಲಿಟ್ಟು ಕುಡಿದಾಗ ಅದು ತಂಪಾಗಿ ಇರುವದರ ಜೊತೆಗೆ ಆರೋಗ್ಯಕ್ಕೂ ಉತ್ತಮವಾಗಿರುತ್ತದೆ ಎಂದು ಮಾಹಿತಿ ನೀಡಿದರು.

## ಸಿಟಿ ರವಿ ಬಂಧನ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ,

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ ಮಾಡಿದ್ದ ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಬೆಳಗಾವಿಯ ಹಿರೇಬಾಗೇವಾಡಿ ಪೊಲೀಸರು, ಸುವರ್ಣಸೌಧದಲ್ಲೇ ಸಿಟಿ ರವಿ ಅವರನ್ನು ಬಂಧಿಸಿ ಠಾಣೆಗೆ ಕರೆದೊಯ್ಯುತ್ತಿದ್ದಾರೆ.

# ಪುಸ್ತಕ ಓದಿ ಮಸ್ತಕ ತುಂಬಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಬ್ಬರೂ ಉತ್ತಮ ಪುಸ್ತಕ ಓದುವ ಮೂಲಕ ಮಸ್ತಕವನ್ನು ಭರ್ತಿ ಮಾಡಿಕೊಂಡು ಸಾರ್ಥಕ ಜೀವನ ನಡೆಸಿ ಎಂದು ಪ್ರಾಚಾರ್ಯ ಎಸ್.ಎ. ಎಳವತ್ತಿ ಹೇಳಿದರು.

ಅವರು ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯ ಮಾಹಾವಿದ್ಯಾಲಯದಲ್ಲಿ ನಿವೃತ್ತ ಉಪನ್ಯಾಸಕ ಬಾಪೂಜಿ ಎಳವತ್ತಿ ಅವರು ವಿದ್ಯಾರ್ಥಿಗಳಿಗಾಗಿ ನೀಡಿದ ಎಂ.ಎಚ್. ತೋಟಪ್ಪನವರ ಬರೆದ 'ಯಶಸ್ಸಿಗೆ ಬೇಕು ತಪಸ್ಸು' ಪುಸ್ತಕವನ್ನು ವಿತರಿಸಿ ಮಾತನಾಡಿದರು.


ವಿದ್ಯಾರ್ಥಿ ಜೀವನ ತುಂಬಾ ಅಮೂಲ್ಯವಾಗಿದ್ದು, ಅದನ್ನು ಸದುಪಯೋಗ ಮಾಡಿಕೊಂಡಲ್ಲಿ ಬದುಕು ಸುಂದರವಾಗುತ್ತದೆ. 'ಯಶಸ್ಸಿಗೆ ಬೇಕು ತಪಸ್ಸು' ಪುಸ್ತಕ ಮಕ್ಕಳ ಜೀವನದ ಮೆಟ್ಟಿಲನ್ನು ರೂಪಿಸುವ ನಿಟ್ಟಿನಲ್ಲಿ ಅತ್ಯಂತ ಸುಂದರವಾಗಿ ಮೂಡಿ ಬಂದಿದ್ದು, ಪ್ರತಿಯೊಬ್ಬ ಮಕ್ಕಳೂ ಈ ಪುಸ್ತಕದ ಜೊತೆಯಲ್ಲಿ ಇತರ ಪುಸ್ತಕಗಳನ್ನು ಓದುವ ರೂಢಿ ಇಟ್ಟುಕೊಳ್ಳಬೇಕು ಎಂದರು.



ಎಂ.ಎಚ್. ತೋಟಪ್ಪನವರ ಮಾತನಾಡಿ, ಜಗತ್ತನ್ನು ಒಳಿತು ಮಾಡುವ ಕಡೆಗೆ ಕೊಂಡೊಯ್ಯುವಂತಹ ಶಕ್ತಿ ಪುಸ್ತಕಕ್ಕೆ ಇದೆ. ಪುಸ್ತಕ ಓದುವುದು ಅತ್ಯಂತ ವಿಧಾಯಕ, ಪ್ರೇರಣೆ, ಸ್ಪೂರ್ತಿ, ನೀಡುವಂತಹ ಅಭ್ಯಾಸ. ನಮ್ಮೆಲ್ಲರ ಜೀವನದ ಅನಾವರಣಕ್ಕೆ ಓದುವ ಹವ್ಯಾಸ ಅತೀ ಮುಖ್ಯ. ಹಾಗಾಗಿ, ಎಲ್ಲರೂ ಪ್ರತಿದಿನ ಗ್ರಂಥಾಲಯದಲ್ಲಿ ಒಂದು ಗಂಟೆಯಾದರೂ ಓದಲು ಸಮಯವನ್ನು ಮೀಸಲಿಡಬೇಕು ಎಂದರು.

ಕನಕದಾಸ ಶಿಕ್ಷಣ ಸಮಿತಿಯ ಸುರೇಶ ಯಡ್ರಾವಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಿ.ಡಿ. ಸಿದ್ದನಗೌಡರ, ಎನ್.ಎಸ್. ಅಂಗಡಿ, ಆಶಾ ಹೆಗ್ಗಣ್ಣವರ, ಬಾಪೂಜಿ ಯಳವತ್ತಿ, ಹಜರತ್ ಅಲಿ ಲಾಡಸಾಬನವರ ಇದ್ದರು.

## ನಿಧನ



ವೆಂಕಟೇಶ ರಾಮಗಿರಿ

ಗದಗ: ಗದಗ-ಬೆಟಗೇರಿ ನಗರಸಭೆಯ ಪ್ರ.ದ.ಸ, ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘದ ರಾಜ್ಯ ಕಾರ್ಯಾಧ್ಯಕ್ಷರಾಗಿದ್ದ ವೆಂಕಟೇಶ ಡಿ.ರಾಮಗಿರಿ (58) ಅವರು ತೀವ್ರ ಅನಾರೋಗ್ಯದಿಂದ ಡಿ. 19ರಂದು ನಿಧನರಾದರು. ಮೃತರ ಅಂತಿಮ ಯಾತ್ರೆಯು ಡಿ. 20ರಂದು ಮಧ್ಯಾಹ್ನ 1 ಗಂಟೆಗೆ ಜರುಗಲಿದೆ.

ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘ, ಕರ್ನಾಟಕ ಪೌರ ಕಾರ್ಮಿಕರ ಮಹಾಸಂಘ, ಶ್ರೀ ವಿಜಯದುರ್ಗ ಯುವಕ ಸಂಘ, ಶ್ರೀ ನಿತ್ಯಾನಂದ ಯುವಕ ಸಂಘ, ಶ್ರೀ ಕೆಂಚಮ್ಮದೇವಿ ಟ್ರಸ್ಟ್‌ನ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.

## ಮತ್ತಷ್ಟು ಬಸ್‌ಗಳ ಖರೀದಿಗೆ ಕ್ರಮ: ಸಚಿವ ಸಂತೋಷ್ ಲಾಡ್

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ:

ರಾಜ್ಯ ಸರ್ಕಾರದ ಶಕ್ತಿ ಯೋಜನೆಯ ಸಮರ್ಪಕ ಅನುಷ್ಠಾನದ ಹಿನ್ನೆಲೆಯಲ್ಲಿ ಸುಗಮ ಸಂಚಾರಕ್ಕಾಗಿ ಈ ಹಿಂದೆ 16 ತಿಂಗಳಲ್ಲಿ ಅಂದಾಜು 4294 ಬಸ್‌ಗಳನ್ನು ಖರೀದಿಸಿದ್ದು, ಬರುವ ಮಾರ್ಚ್ ಅಂತ್ಯದೊಳಗೆ ಮತ್ತಷ್ಟು ಬಸ್‌ಗಳನ್ನು ಖರೀದಿಸಲಾಗುವುದು ಎಂದು ಸಚಿವ ಸಂತೋಷ್ ಲಾಡ್ ಹೇಳಿದರು.

ಈಗಾಗಲೇ ನಾಲ್ಕೂ ಸಾರಿಗೆ ನಿಗಮಗಳಲ್ಲಿ 9000 ಚಾಲನಾ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರ ಅನುಮತಿ ನೀಡಿದೆ. ಈ ಪೈಕಿ ಈಗಾಗಲೇ ಅಂದಾಜು 4000 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಬಾಕಿ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಸಚಿವರು ವಿಧಾನ ಪರಿಷತ್ತನಲ್ಲಿ ಸದಸ್ಯರಾದ ಎಸ್.ವಿ. ಸಂಕನೂರ ಅವರು ಕೇಳಿದ ಪ್ರಶ್ನೆಗೆ ಸಾರಿಗೆ ಮತ್ತು ಮುಜರಾಯಿ ಸಚಿವರ ಪರವಾಗಿ ಉತ್ತರಿಸಿದರು.

# ಡಿ.21ರಂದು ವಿಶ್ವ ಧ್ಯಾನ ದಿನ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಯುವ ಭಾರತ ಪತಂಜಲಿ ಯೋಗ ಸಮಿತಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಡಿ.21ರಂದು ಬೆಳಿಗ್ಗೆ 7.30ಕ್ಕೆ ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯ ಆವರಣದಲ್ಲಿ ವಿಶ್ವ ಧ್ಯಾನ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿಕೊಳ್ಳುವರು. ನೇತೃತ್ವವನ್ನು ಗದಗ ಅಡವೀಂದ್ರಸ್ವಾಮಿಮಠದ ಮಹೇಶ್ವರ ಸ್ವಾಮೀಜಿ, ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸಲಿದ್ದು, ಡಾ. ಎಸ್.ಸಿ. ಚವಡಿ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಧರ್ಮಸ್ಥಳ ಗ್ರಾಮಾಭಿವೃದ್ಧಿಯ ತಾಲೂಕು ಯೋಜನಾಧಿಕಾರಿ ಪುನೀತ ಓಲೆಕಾರ, ಪಿ.ಎ. ವಂಟಕರ, ವಿಜಯ ನೀಲಗುಂದ, ನಾಗರಾಜ ದೇಶಪಾಂಡೆ, ಪ್ರಿಯಾಂಕಾ ಶಿರಬಡಿಗಿ, ದಶರತ ಕೋಟೆಗೌಡ್ರ, ಹರ್ಷಿಲತಾ ದೇಶಪಾಂಡೆ, ಗೀತಾ ಜಾಧಾವ, ಶೋಭಾ ಪಾಟೀಲ್, ನಾಗವೇಣಿ ನಾಯಕ, ಅಕ್ಕಮ್ಮಾ ನೀಲಗುಂದ, ಕವಿತಾ ದೊಟಿಕಲ್ಲ, ಮಧು ಕೋರಿ ಭಾಗವಹಿಸುವುರು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಗೆ ತಿಳಿಸಿದ್ದಾರೆ.


### ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಹಿನ್ನೆಲೆ

# ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಗದಗ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಬೆಳಗಾವಿ ನಗರದಲ್ಲಿ ಹಮ್ಮಿಕೊಳ್ಳುತ್ತಿರುವ ಬೃಹತ್ ಸಮಾವೇಶದ ಕುರಿತು ಡಿ.20ರಂದು ಸಂಜೆ 4ಕ್ಕೆ ಪೂರ್ವಭಾವಿ ಸಭೆ ನಡೆಯಲಿದೆ.

ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್,




ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರಿಫಾರ್ಮ್ಸ್ ವಿಭಾಗ, ಐಟಿ–ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ, ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ, ರೋಣ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಲಿದ್ದು, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಸೇರಿದಂತೆ ಕೆಪಿಸಿಸಿ ಉಸ್ತುವಾರಿಗಳು ಹಾಗೂ ಮಾಜಿ ಶಾಸಕರು ಸಭೆಯಲ್ಲಿ ಭಾಗವಹಿಸಲಿದ್ದಾರೆ.

### ‘ವಿಶೇಷ ಚೇತನ ಮಕ್ಕಳ ಪರಿಸರ ನಿರ್ಮಾಣ’ ಕಾರ್ಯಕ್ರಮದಲ್ಲಿ ಎಸ್.ಪಿ. ಪ್ರಭಯ್ಯನಮಠ

# ವಿಶೇಷ ಚೇತನ ಮಕ್ಕಳೂ ಸಾಧಿಸಬಲ್ಲರು

■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳನ್ನು ಸಾಮಾನ್ಯ ಮಕ್ಕಳೊಂದಿಗೆ ಒಟ್ಟುಗೂಡಿಸಿ ಶಾಲೆಯ ಎಲ್ಲ ಚಟುವಟಿಕೆಗಳಲ್ಲಿ ಪರಿಣಾಮಕಾರಿಯಾಗಿ ಭಾಗವಹಿಸುವಿಕೆಯನ್ನು ಸಕ್ರೀಯಗೊಳಿಸುವ ಕಾರ್ಯಕ್ಕೆ ನಾವೆಲ್ಲರೂ ಮುಂದಾಗಬೇಕೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಹೇಳಿದರು.

ಅವರು ಗುರುವಾರ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಸಮನ್ವಯಾಧಿಕಾರಿಗಳ ಕಾರ್ಯಾಲಯ, ಗದಗ–ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಗದುಗಿನ ಸರ್ಕಾರಿ ಶಾಲೆ ನಂ.2ರಲ್ಲಿ ಕ್ಲಸ್ಟರ್



5ರ ಮುಖ್ಯೋಪಾಧ್ಯಾಯರಿಗಾಗಿ ಏರ್ಪಡಿಸಿದ್ದ ವಿಶೇಷ ಚೇತನ ಮಕ್ಕಳ ಶೈಕ್ಷಣಿಕ ಅಭಿವೃದ್ಧಿ ಹಾಗೂ ಪೂರಕ ಪರಿಸರ ನಿರ್ಮಾಣ ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಶೇಷ ಚೇತನ ಮಕ್ಕಳು ಸಾಧಿಸಬಲ್ಲರು. ಅವರಿಗೆ ಸಹಾನುಭೂತಿ–ಅನುಕಂಪ ಬೇಡ. ಉತ್ತಮ ಪರಿಸರ, ಪ್ರೋತ್ಸಾಹ ದೊರೆತರೆ ಅವರೂ ಸಾಧಕ ವ್ಯಕ್ತಿಗಳಾಗಿ, ಸಮಾಜ ಗುರುತಿಸಿ ಗೌರವಿಸುವ ಚೇತನಗಳಾಗುತ್ತಾರೆ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಗದಗ–ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ರೇವಣಸಿದ್ದೇಶ್ವರ ಉಪ್ಪಿನ ಮಾತನಾಡಿ, ಅಂಗವಿಕಲತೆ ಶಾಪವಲ್ಲ. ಮಕ್ಕಳು ಆಟ–ಪಾಠದೊಂದಿಗೆ ಬಾಲ್ಯ ಕಳೆಯಬೇಕು. ವಿಶೇಷಚೇತನ ಮಕ್ಕಳು ಸಾಮಾನ್ಯ ಮಕ್ಕಳೊಂದಿಗೆ ಚಟುವಟಿಕೆಗಳಲ್ಲಿ ನಿರಂತರ ಪಾಲ್ಗೊಳ್ಳುವಂತೆ ನಾವೆಲ್ಲರೂ ಶ್ರಮಿಸಬೇಕೆಂದರು.

ಗದಗ–ಬೆಟಗೇರಿ ರೋಟರಿ ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ, ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ, ಅಕ್ಷಯ್ ಶೆಟ್ಟಿ ವಿಶೇಷ ಚೇತನ ಮಕ್ಕಳ ಪಾಲನೆ–ಪೋಷಣೆ ಕುರಿತು ಮಾತನಾಡಿದರು.

ಶಿಕ್ಷಕಿಯರಾದ ವ್ಹಿ.ಎಸ್. ಕಬ್ಬರಗಿ, ಎಸ್.ವಿ. ಇಂದಿರಾ ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯ ಎಫ್.ಜೆ. ದಲಭಂಜನ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಬಸವರಾಜ ಮೆಣಸಿನಕಾಯಿ ಪರಿಚಯಿಸಿದರು. ಸಂಪನ್ಮೂಲ ವ್ಯಕ್ತಿ ಶಶಿಧರ ಚಳಗೇರಿ ನಿರೂಪಿಸಿದರು. ಸಿ.ಆರ್.ಪಿ ಎಸ್.ಸಿ. ಹಿರೇಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷೆ ಸವಿತಾ ಜಡಿ, ವಿವಿಧ ಶಾಲೆಗಳ ಮುಖ್ಯೋಪಾಧ್ಯಾಯರಾದ ಪರಿಮಳಾ ಮಣ್ಣೂರ, ಕವಿತಾ ಹಾದಿ, ಮಹಾದೇವ ಸರವಿ, ಮಂಜುನಾಥ ಚಂದಾವರಿ, ಎಂ.ಎಂ. ಹಿಡ್ಕಿಮಠ, ಆರ್.ಎಂ. ಅಂಗಡಿ, ವಿ.ಕೆ. ಪಾಟೀಲ, ಸಿ.ಎಫ್. ನಾಗನೂರ ಮುಂತಾದವರಿದ್ದರು.

ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ವಿಶೇಷ ಚೇತನರಲ್ಲಿ ಕಂಡುಬರುವ 21 ನ್ಯೂನ್ಯತೆಗಳನ್ನು ಗುರುತಿಸಿ ಅವುಗಳನ್ನು ವರ್ಗೀಕರಿಸಿ ವಿಶೇಷ ಮಗು ಸಾಮಾನ್ಯ ಮಗುವಿನೊಂದಿಗೆ ಸಾಮಾನ್ಯ ಶಾಲೆಯಲ್ಲಿ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುವಂತೆ ನಾವು ಶ್ರಮಿಸಬೇಕು. ಸರ್ಕಾರದ ಯೋಜನೆಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸಲಾಗಿದ್ದು, ಅವುಗಳು ಸದುಪಯೋಗ ಆಗಲಿ ಎಂದರು.

# ನೂತನ ನಾಮನಿರ್ದೇಶಿತ ಸದಸ್ಯರ ನೇಮಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಗೆ ಕರ್ನಾಟಕ ಪೌರಸಭೆ ಕಾಯ್ದೆಯಡಿಯಲ್ಲಿ ಐವರು ನೂತನ ನಾಮನಿರ್ದೇಶಿತ ಸದಸ್ಯರನ್ನು ನೇಮಕ ಮಾಡಿ ಸರಕಾರ ಆದೇಶ ಹೊರಡಿಸಿದೆ.

ಪಟ್ಟಣದ ಯುವ ಮುಖಂಡರಾದ ನೀಲಪ್ಪ ಪೂಜಾರ, ವಾಸೀಂಅಕ್ರಮ್ ಮುಚ್ಚಾಲೆ, ಶಿವಪ್ರಕಾಶ ಕೊಂಚಿಗೇರಿಮಠ, ಮಹಾಂತೇಶ ಗುಡಿಸಲಮನಿ ಹಾಗೂ ಕಿರಣ ನವಲೆ ಇವರನ್ನು ತಕ್ಷಣದಿಂದ ಜಾರಿಯಾಗುವಂತೆ ಪುರಸಭೆಗೆ ನಾಮನಿರ್ದೇಶನ ಮಾಡಿ ನಗರಾಭಿವೃದ್ಧಿ ಇಲಾಖೆಯ ಸರಕಾರದ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ ಆದೇಶ ನೀಡಿದ್ದಾರೆ.

# ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

SBI-ASF ಆರ್‌ಸೆಟಿ (ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ ಗದಗ) ಸಂಸ್ಥೆಯಲ್ಲಿ ಉಚಿತ ಊಟ–ವಸತಿಯೊದಿಗೆ ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ 2025ರ ಜನವರಿ 2ರಿಂದ ಆರಂಭವಾಗಲಿದೆ.

ಆಸಕ್ತರು, ನಿರುದ್ಯೋಗಿಗಳು, ಯುವಕ–ಯುವತಿಯರು, ಮಹಿಳೆಯರು, ಸ್ವ–ಸಹಾಯ ಗುಂಪಿನವರು ಮತ್ತು ಸಾಮಾನ್ಯ ಯಾವುದೇ 19ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದವರಿಂದ ಅರ್ಜಿ ಆಹ್ವಾನಿಸಿದೆ. ತರಬೇತಿ ಪಡೆದವರಿಗೆ ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣಪತ್ರ ಕೊಡಲಾಗುವುದು. ತರಬೇತಿ ಪಡೆಯಲು ಇಚ್ಛಿಸುವವರು ಮೊದಲೇ ಅರ್ಜಿ ಸಲ್ಲಿಸಬೇಕು. ಕಡ್ಡಾಯವಾಗಿ ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರಬೇಕು, ಬಿ.ಪಿ.ಎಲ್ ರೇಶನ್ ಕಾರ್ಡ್, ಅಂತ್ಯೋದಯ, ಎ.ಎ.ವಾಯ್, ಪಿ.ಎಚ್.ಎಚ್, ಆದ್ಯತಾ ಕುಟುಂಬ ರೇಶನ್ ಕಾರ್ಡ್ ಅಥವಾ (ನರೇಗಾ ಜಾಬ್ ಕಾರ್ಡ್), ಇವುಗಳಲ್ಲಿ ಯಾವುದಾದರು ಒಂದನ್ನು ಹೊಂದಿರಬೇಕು.

ಆಧಾರ್ ಕಾರ್ಡ್, ಫೋಟೋ, ರೇಶನ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಈ ಎಲ್ಲ 2 ಸೆಟ್ ನಕಲು ಪ್ರತಿಗಳನ್ನು ಸಲ್ಲಿಸಬೇಕು. ಎಸ್.ಬಿ.ಐ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂನಲ್ಲಿ ತುಂಬಿ ನಿರ್ದೇಶಕರು, SBI-ASF ಆರ್‌ಸೆಟಿ ಸಂಸ್ಥೆ ಹುಲಕೋಟಿ–ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ–ಗದಗ ಇವರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–9480880201/ 8880169996/ 9632287949/ 9632635268/ 9448874412 ಸಂಪರ್ಕಿಸಲು ಪ್ರಕಟಣೆ ವಿನಂತಿಸಿದೆ.

# ಆಟಗಾರರಿಗೆ ಸಮವಸ್ತ್ರ ವಿತರಣೆ, ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಿಮಡಿಯ ಅಬುಹುರೇರಾ ಮಸ್ಜಿದ್ ಆವರಣದಲ್ಲಿ ಕಾರ್ಪೆಂಟರ್ ಸಂಘದ ಕ್ರಿಕೆಟ್ ಆಟಗಾರರಿಗೆ ಎಮ್.ಜಿ. ಚಾರಿಟೇಬಲ್ ಟ್ರಸ್ಟ್‌ನ ವತಿಯಿಂದ ಸಮವಸ್ತ್ರ ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಪೆಂಟರ್ ಸಂಘದ ಎಲ್ಲ ಕ್ರಿಕೆಟ್ ಆಟಗಾರರು ಸಮವಸ್ತ್ರ ಸ್ವೀಕರಿಸಿ ಸಂತಸ ವ್ಯಕ್ತಪಡಿಸಿದರು.

ಎಮ್.ಜಿ. ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಮಕ್ತುಮಸಾಬ ನಾಯಕ್ ಅವರಿಗೆ ಇತ್ತೀಚೆಗೆ ‘ನವ ಭಾರತ ಉದಯ ಪ್ರತಿಷ್ಠಾನ’ ಬೆಂಗಳೂರು ಇವರು ಕೊಡಮಾಡುವ ‘ಕನ್ನಡ ಕಣ್ಮಣಿ’ ಪ್ರಶಸ್ತಿ ದೊರೆತ ಹಿನ್ನೆಲೆ ಹಾಗೂ ಟ್ರಸ್ಟ್‌ನ ಸಂಯೋಜಕ ಸುಲೇಮಾನ್ ಕಿಲ್ಲೇದಾರರಿಗೆ ಮೌಲಾನಾ ಅಬ್ದುಲ್ ಗಫುರ ಆಲೂಮ್ನಿ ಸಂಘದ ಪರವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಆಲೂಮ್ನಿ ಅಸೋಸಿಯೆಷನ್‌ನ ಸರ್ವ ಸದಸ್ಯರು, ಕಾರ್ಪೆಂಟರ್ ಸಂಘದ ಸರ್ವ ಸದಸ್ಯರು, ಅಬುಹುರೇರಾ ಮಸ್ಜಿದ್‌ನ ಹಿರಿಯರು ಪಾಲ್ಗೊಂಡಿದ್ದರು.

# ಅಂಬೇಡ್ಕರ್ ದೇಶದ ಜನತೆಯ ಆತ್ಮಾಭಿಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂವಿಧಾನಬದ್ಧ ಸ್ಥಾನದಲ್ಲಿ ಕುಳಿತುಕೊಂಡು, ಸಂವಿಧಾನಬದ್ಧ ವ್ಯಕ್ತಿಯಾಗಿ, ಸಂವಿಧಾನ ಸೃಷ್ಟಿಕರ್ತನ ಬಗ್ಗೆ ಅವಮಾನಕರ ರೀತಿಯಲ್ಲಿ ಮಾತನಾಡಿರುವುದು ಖಂಡನೀಯ. ಅಂಬೇಡ್ಕರ್ ಪ್ಯಾಶನ್ ಅಲ್ಲ, ದೇಶದ ಜನತೆಯ ಆತ್ಮಾಭಿಮಾನ ಎಂದು ಕೆಪಿಸಿಸಿ ಸಾಮಾಜಿಕ ಜಾಲತಾಣ ವಿಭಾಗದ ಪ್ರಧಾನ ಕಾರ್ಯದರ್ಶಿ ಪ್ರವೀಣ ಸಂಗಳದಶೆಟ್ಟರ್ ಪ್ರತಿಕ್ರಿಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶದ ಜನಸಾಮಾನ್ಯರಿಗೆ, ಕಟ್ಟ ಕಡೆಯ ಪ್ರಜೆಗೆ ಮೂಲಭೂತ ಹಕ್ಕುಗಳನ್ನು ಕೊಟ್ಟು, ಬದುಕಲು ಸ್ವಾತಂತ್ರ್ಯವನ್ನು ಕೊಟ್ಟಿದ್ದು ಅಂಬೇಡ್ಕರ್ ಬರೆದ ಸಂವಿಧಾನ. ಕಾಂಗ್ರೆಸ್‌ನ್ನ ಹೇಳಿಕೆಯನ್ನು ತಿರುಚಿದೆ ಎಂಬುದು ಅವರ ಅಸಹಾಯಕತೆಯನ್ನು ತೋರಿಸುತ್ತದೆ ಎಂದಿದ್ದಾರೆ.

## ಗ್ರಾಮ ಪಂಚಾಯತ ಕಾರ್ಯಾಲಯ, ಕೊರ್ಲಹಳ್ಳಿ

ತಾಲೂಕ: ಮುಂಡರಗಿ mun.kolahalli.gdg@gmail.com ಜಿಲ್ಲಾ: ಗದಗ

ಸಂ. ಗ್ರಾ. ಪಂ.ಕೊ/ ಮ.ಗಾಂ.ರಾ.ಗ್ರಾ.ಉ.ಖಾ. ಯೊಜನೆ/ದರಪಟ್ಟಿ/2024–25 ದಿನಾಂಕ:16/12/2024

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕೊರ್ಲಹಳ್ಳಿ ಇವರ 2024–25ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ್‌ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಬೆಣ್ಣಿಹಳ್ಳಿ ಗ್ರಾಮದ ಧರ್ಮಪ್ಪ ಹೊಸಕುರಬರ ಮನೆಯಿಂದ ಹಳ್ಳದವರೆಗೆ ಸಿಸಿ ಗಟಾರ ನಿರ್ಮಾಣ | 161276.15 |
| 2 | ಬೆಣ್ಣಿಹಳ್ಳಿ ಗ್ರಾಮದ ತೋಟದ ರಸ್ತೆಯಿಂದ ಕಾಲೂವೆವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು | 90254.36 |
| 3 | ಕೊರ್ಲಹಳ್ಳಿ ಗ್ರಾಮದ ಕಬರಸ್ತಾನದ ಹತ್ತಿರ ಸಿಡಿ ನಿರ್ಮಾಣ | 75526.32 |
| 4 | ಬೆಣ್ಣಿಹಳ್ಳಿ ಗ್ರಾಮದ ಸಮಾಜ ಮಂದಿರದಿಂದ ಬನ್ನಿಕಟ್ಟಿಯವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು | 91008.02 |
| 5 | ಬೆಣ್ಣಿಹಳ್ಳಿ ಗ್ರಾಮದ ಬೀಡನಾಳ ಮುಖ್ಯ ರಸ್ತೆಯಿಂದ ಯಲ್ಲಪ್ಪ ಡಂಬಳ ಹೊಲದವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು | 91008.02 |
| 6 | ಕೊರ್ಲಹಳ್ಳಿ ಗ್ರಾಮದ ಮೇನ ಕಾಲುವೆಯಿಂದ ಬಾಪೂಜಿಯವರ ಹೊಲದವರೆಗೆ ರಸ್ತೆ ಅಭಿವೃದ್ಧಿ | 51120.01 |
| 7 | ಕೊರ್ಲಹಳ್ಳಿ ಗ್ರಾಮದ ಶಂಕ್ರಪ್ಪ ಹಮ್ಮಸಾಗರ ಹೊಲದ ಹತ್ತಿರ ಸಿ.ಡಿ ನಿರ್ಮಾಣ | 77360.5 |
| 8 | ಕೊರ್ಲಹಳ್ಳಿ ಗ್ರಾಮದ ಕಲಕೇರಿ ಮೇನ ರಸ್ತೆಯಿಂದ ಬಾಗೇಶ ಜೈನರ ಹೊಲದವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು | 39581.45 |
| 9 | ಕೊರ್ಲಹಳ್ಳಿ ಗ್ರಾಮದ ಶಿವಕುಮಾರಗೌಡ ಪಾಟೀಲ ಇವರ ಹೊಲದಿಂದ ದುರಗಮ್ಮನಗುಡಿಯವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು | 50668.81 |
| 10 | ಕೊರ್ಲಹಳ್ಳಿ ಗ್ರಾಮದ ಶೇಖಪ್ಪ ಮಜ್ಜಗಿ ಹೊಲದ ಹತ್ತಿರ ರಸ್ತೆಗೆ ಸಿ.ಡಿ ನಿರ್ಮಾಣ | 75424.41 |
| 11 | ಕೊರ್ಲಹಳ್ಳಿ ಗ್ರಾಮದ ಟಾಕಪ್ಪ ಡೊಳ್ಳನ ಹೊಲದಿಂದ ಬಚೆನಹಳ್ಳಿ ದೇವಪ್ಪ ಹೊಲದವರೆಗೆ ಮೊರಂ ರಸ್ತೆ ಅಭಿವೃದ್ದಿ ಪಡಿಸುವುದು | 51120.01 |
| 12 | ಕೊರ್ಲಹಳ್ಳಿ ಗ್ರಾಮದ ರೇಣವ್ವ ಕೊಟ್ರಪ್ಪ ಗುಡ್ಲಾನೂರ ಹೊಲದಿಂದ ಕೊಟೇಪ್ಪ ಮೈಲಾರಪ್ಪ ಕೊಳಲ ಹೊಲದವರೆಗೆ ರಸ್ತೆ ಅಭಿವೃದ್ದಿ | 51120.01 |
| 13 | ಕೊರ್ಲಹಳ್ಳಿ ಗ್ರಾಮದ ಹೊಸೂರು ಪ್ಲಾಟಿನ ಸಂಗವ್ವ ಕಿಳ್ಳಿಕ್ಯಾತರ ಮನೆಯಿಂದ ಬೀಡನಾಳ ಮುಖ್ಯ ರಸ್ತೆಯವರೆಗೆ ಸಿಸಿ ಗಟಾರ ನಿರ್ಮಾಣ | 78659.53 |
| 14 | ಕೊರ್ಲಹಳ್ಳಿ ಗ್ರಾಮದ ಕೊಟೆಪ್ಪ ಪಲ್ಲೇದ ಇವರ ಮನೆಯಿಂದ ನಾಗಪ್ಪ ಚೌಡ್ಕಿ ಮನೆಯವ ಹಿಂದುಗಡೆ ಸಿಸಿ ಗಟಾರ ನಿರ್ಮಾಣ | 75571.01 |
| 15 | ಕೊರ್ಲಹಳ್ಳಿ ಗ್ರಾಮದ ಹೊಸ ಪ್ಲಾಟಿನ ಎಡ ಭಾಗದಲ್ಲಿ ಸಿಸಿ ಗಟಾರ | 78912.53 |
| 16 | ಕೊರ್ಲಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಆಟದ ಮೈದಾನ ಅಭೀವೃದ್ಧಿ ಪಡಿಸುವುದು | 164099.27 |
| 17 | ಮಕ್ತುಂಪೂರ ಗ್ರಾಮದ ಕೊಟ್ರಪ್ಪ ವಾಲಿಕಾರ ಇವರ ಮನೆ ಹತ್ತಿರ ಸಿ.ಸಿ ಗಟಾರ ನಿರ್ಮಾಣ | 229774.24 |
| 18 | ಕೊರ್ಲಹಳ್ಳಿ ಗ್ರಾಮದ ಆದರ್ಶ ಶಾಲೆಯ ಆಟದ ಮೈದಾನ ಅಭೀವೃದ್ದಿ ಪಡಿಸುವುದು | 82943.38 |
| 19 | ಕೊರ್ಲಹಳ್ಳಿ ಗ್ರಾಮದ ದುರುಗವ್ವ ಕ್ಯಾಲೂರ ಇವರ ಹೊಲದಿಂದ ಮದುಸೂದನ ಕೊರ್ಲಹಳ್ಳಿ ಇವರ ಹೊಲದವರೆಗೆ ರಸ್ತೆಗೆ ಮೊರಂ ಹಾಕಿ ರಸ್ತೆ ಅಭೀವೃದ್ದಿ ಪಡಿಸುವುದು | 39581.45 |
| 20 | ಕೊರ್ಲಹಳ್ಳಿ ಗ್ರಾಮದ ರಂಗಪ್ಪ ಕೊಳಲ ಹೊಲದ ಹತ್ತಿರ ಮೊರಂ ಹಾಕಿ ರಸ್ತೆ ಅಭಿವೃದ್ಧಿ ಪಡಿಸುವುದು | 51120.01 |
| 21 | ಕೊರ್ಲಹಳ್ಳಿ ಗ್ರಾಮದ ಹನಮಪ್ಪ ಬೇಟಗೇರಿ ಇವರ ಹೊಲದಿಂದ ವಿಜೇಂದ್ರಗೌಡ ಪಾಟಿಲ ಹೊಲದವರೆಗೆ ರಸ್ತೆ ಅಭಿವೃದ್ದಿ ಪಡಿಸುವುದು | 51120.01 |
| 22 | ಕೊರ್ಲಹಳ್ಳಿ ಸಣ್ಣ ಹನುಮಪ್ಪ ಬೇಟಗೇರಿ ಹೊಲದಿಂದ ಗಾಳೆಪ್ಪ ಮಾಯಪ್ಪ ಮಾದರ ಇವರ ಹೊದವರೆಗೆ ರಸ್ತೆ ಅಭಿವೃದ್ದಿ ಪಡಿಸುವುದು | 42358.49 |

ಷರಾ ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಖಾಲಿ ಟೆಂಡರ್ ಫಾರಂ ಬೆಲೆ 500 ರೂ. ಗಳು, ನಿಗದಿಪಡಿಸಿದೆ ಅರ್ಹ ವೆಂಡರ್/ ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ **ದಿನಾಂಕ: 20/12/2024 ರಿಂದ 27/12/2024** ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ **ದಿನಾಂಕ: 26/12/2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ ತೆರೆಯುವ **ದಿನಾಂಕ ಹಾಗೂ ಸಮಯ: 30/12/2024** ಮಧ್ಯಾಹ್ನ 3.00 ಗಂಟೆ. ನಿಬಂಧನೆಗಳು ಷರತ್ತು/ ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕೊರ್ಲಹಳ್ಳಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/– ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಕೊರ್ಲಹಳ್ಳಿ**

**ಸಹಿ/– ಅಧ್ಯಕ್ಷರು**
**ಗ್ರಾಮ ಪಂಚಾಯತ ಕೊರ್ಲಹಳ್ಳಿ**

ವಾ.ಸಾ.ಇ/ಗದಗ/472/ದೇಶಪಾಂಡೆಪಬ್ಲಿಸಿಟಿ/2024–25

# ಖಾಲಿ ಇರುವ ಯುವ ಪರಿವರ್ತಕರ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನ ಆರೋಗ್ಯ ಕೇಂದ್ರ ಎಪಿಡಿಮಿಯಾಲಜಿ ವಿಭಾಗ ರಾಷ್ಟ್ರೀಯ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ , ಬೆಂಗಳೂರು ( ನಿಮ್ಹಾನ್ಸ್ ) ಇವರ ಸಹಯೋಗದಲ್ಲಿ ಆರಂಭಿಸಲಾಗಿರುವ ಯುವ ಸ್ಪಂದನ ಕೇಂದ್ರದಲ್ಲಿ ನರಗುಂದ ತಾಲೂಕಿನಲ್ಲಿ 01 ಯುವ ಪರಿವರ್ತಕರ ಹುದ್ದೆ ಖಾಲಿ ಇದ್ದು ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಇಚ್ಛಿಸುವವರು ಈ ಕೆಳಕಾಣಿಸಿದ ಅರ್ಹತೆಯನ್ನು ಹೊಂದಿರಬೇಕು.

ಯುವ ಪರಿವರ್ತಕರ ಹುದ್ದೆಗೆ ಕಾರ್ಯನಿರ್ವಹಿಸಲು ಇಚ್ಛಿಸುವವರು ಪದವಿಧರರಾಗಿರಬೇಕು. ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು. ವಾಕ್‌ಚಾತುರ್ಯ ಹೊಂದಿರಬೇಕು. ಕಂಪ್ಯೂಟರ್ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು. ಆಸಕ್ತ ಯುವಕ/ಯುವತಿಯರು ತಮ್ಮ ಸ್ವ–ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇಲ್ಲಿ ಡಿ. 31 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗೆ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ , ಬೆಂಗಳೂರು (ನಿಮ್ಹಾನ್ಸ್) ಇಲ್ಲಿ ತರಬೇತಿ ನೀಡಲಾಗುವುದು. ಆಯ್ಕೆಯಾದ ಯುವ ಪರಿವರ್ತಕರಿಗೆ ಗೌರವ ಸಂಭಾವನೆ ಹಾಗೂ ಪ್ರವಾಸ ಭತ್ಯೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 7349223455 ಕಚೇರಿ ದೂರವಾಣಿ ಸಂಖ್ಯೆ 08372–238345 ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿ.ಪಂ ಸಿಇಒ ಭೇಟಿ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಗುರುವಾರ ಮಂಟೂರು ಹಾಗೂ ಶಿರಗುಪ್ಪಿ ಗ್ರಾಮ ಪಂಚಾಯಿತಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅನುಷ್ಠಾನಗೊಳಿಸಿದ ಕಾಮಗಾರಿಗಳನ್ನು ಪರಿವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಉದ್ಯೋಗ ಯೋಜನೆಯ ಸಹಾಯಕ ನಿರ್ದೇಶಕರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಸದಸ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka